ಸಂಪುಟ 01 | ಸಂಚಿಕೆ 210 | ಶುಕ್ರವಾರ 26 ಜೂನ್ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೇಸೆ

NAIJYA DESE
ಸತ್ಯದ ದಿಕ್ಕು TRUE PATH
ಕನ್ನಡ ದಿನ ಪತ್ರಿಕೆ
REGIONAL KANNADA DAILY MORNING
ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ
RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

1) ಅಂತಾರಾಷ್ಟ್ರೀಯ ಹಿಂಸಾಚಾರ ಪೀಡಿತರ ಬೆಂಬಲ ದಿನ : ಹಿಂಸಾಚಾರಕ್ಕೆ ಒಳಗಾದವರ ಬೆಂಬಲಕ್ಕೆ ನಿಲ್ಲುವುದು ಮತ್ತು ಇಂತಹ ದೌರ್ಜನ್ಯಗಳನ್ನು ತಡೆಯುವ ಬಗ್ಗೆ ಜಾಗೃತಿ ಮೂಡಿಸಲು ವಿಶ್ವಸಂಸ್ಥೆಯು ಈ ದಿನವನ್ನು ಆಚರಿಸುತ್ತದೆ.

2) ಅಂತಾರಾಷ್ಟ್ರೀಯ ಮಾದಕ ದ್ರವ್ಯ ವಿರೋಧಿ ದಿನ
ಮಾದಕ ದ್ರವ್ಯಗಳ ದುರುಪಯೋಗ ಮತ್ತು ಅದರ ಕಳ್ಳಸಾಗಣೆಯಿಂದ ಸಮಾಜಕ್ಕೆ ಹಾಗೂ ಆರೋಗ್ಯಕ್ಕೆ ಆಗುವ ಹಾನಿಯ ಬಗ್ಗೆ ಜನರಿಗೆ ತಿಳುವಳಿಕೆ ನೀಡುವುದು ಇದರ ಮುಖ್ಯ ಉದ್ದೇಶವಾಗಿದೆ.

3) ವಿಶ್ವ ಶೀತಲೀಕರಣ ದಿನ
ಆಹಾರ ಮತ್ತು ಔಷಧಿ ಸಂರಕ್ಷಣೆಯಲ್ಲಿ ಶೀತಲೀಕರಣ (Refrigeration) ತಂತ್ರಜ್ಞಾನದ ಮಹತ್ವವನ್ನು ಸಾರಲು ಆಚರಿಸಲಾಗುತ್ತದೆ.

## ಸುಭಾಷಿತ

ಜಗತ್ತಿನ ಯಾವುದೇ ಶಕ್ತಿಗಿಂತ ಪೆನ್ನು ಮತ್ತು ಕಾಗದದ ಶಕ್ತಿ ದೊಡ್ಡದು. ಒಂದು ರೊಟ್ಟಿ ಕಡಿಮೆ ತಿನ್ನಿ ಆದರೆ ನಿಮ್ಮ ಮಕ್ಕಳಿಗೆ ಖಂಡಿತವಾಗಿಯೂ ಶಿಕ್ಷಣ ನೀಡಿ.

ಡಾ. ಬಿ ಆರ್ ಅಂಬೇಡ್ಕರ್

## ತುಂಗಭದ್ರಾ ಅಣೆಕಟ್ಟಿಗೆ ನೂತನವಾಗಿ 33 ಅಳವಡಿಸಲಾದ ಕ್ರಸ್ಟ್ ಗೇಟುಗಳ ಲೋಕಾರ್ಪಣೆ

### ತುಂಗಭದ್ರಾ ಮಂಡಳಿ ಹಾಗೂ ಜಲಸಂಪನ್ಮೂಲ ಇಲಾಖೆಯ ಜಂಟಿ ಸಹಯೋಗದಲ್ಲಿ ನೆರವೇರಿಸಲಾಯಿತು

ನೈಜ್ಯ ದೇಸೆ ನ್ಯೂಸ್

**ಹೊಸಪೇಟೆ: ತುಂಗಭದ್ರಾ ಮಂಡಳಿ ಹಾಗೂ ಜಲಸಂಪನ್ಮೂಲ ಇಲಾಖೆ ಸಹಯೋಗದಲ್ಲಿ ತುಂಗಭದ್ರಾ ಜಲಾಶಯಕ್ಕೆ ನೂತನವಾಗಿ ಅಳವಡಿಸಲಾದ 33 ಕ್ರಸ್ಟ್ ಗೇಟು ಲೋಕಾರ್ಪಣೆ ಕಾರ್ಯಕ್ರಮ ಭವ್ಯವಾಗಿ ನಡೆಯಿತು. ಈ ಯೋಜನೆ ತುಂಗಭದ್ರಾ ಜಲಾಶಯದ ಸುರಕ್ಷತೆ ಹೆಚ್ಚಿಸುವುದರ ಜೊತೆಗೆ ಕರ್ನಾಟಕ, ಆಂಧ್ರಪ್ರದೇಶ ಹಾಗೂ ತೆಲಂಗಾಣ ರಾಜ್ಯಗಳ ಲಕ್ಷಾಂತರ ರೈತರಿಗೆ ನೀರಿನ ಭದ್ರತೆ ಒದಗಿಸುವ ಮಹತ್ವದ ಹೆಜ್ಜೆಯಾಗಿದೆ.**









ಕೊಪ್ಪಳ ಜಿಲ್ಲೆಯ ಮುನಿರಾಬಾದ್ ಸರ್ಕಾರಿ ಹೈಸ್ಕೂಲ್ ಮೈದಾನದಲ್ಲಿ ನಡೆದ ಸಾರ್ವಜನಿಕ ಸಮಾರಂಭದಲ್ಲಿ ಡಿ.ಕೆ. ಶಿವಕುಮಾರ್, ಕೇಂದ್ರ ಜಲಶಕ್ತಿ ಸಚಿವ ಸಿ.ಆರ್. ಪಾಟೀಲ್, ಆಂಧ್ರಪ್ರದೇಶ ಮುಖ್ಯಮಂತ್ರಿ ಎನ್. ಚಂದ್ರಬಾಬು ನಾಯ್ಡು ಹಾಗೂ ತೆಲಂಗಾಣ ಮುಖ್ಯಮಂತ್ರಿ ಎ. ರೇವಂತ್ ರೆಡ್ಡಿ ಉಪಸ್ಥಿತರಿದ್ದು, ಮೂರು ರಾಜ್ಯಗಳ ಸಹಕಾರದ ಸಂಕೇತವಾಗಿ ಕಾರ್ಯಕ್ರಮಕ್ಕೆ ವಿಶೇಷ ಮೆರಗು ತಂದರು. ಭಾಷಣದಲ್ಲಿ ಡಿ.ಕೆ. ಶಿವಕುಮಾರ್ ಅವರು ತುಂಗಭದ್ರಾ ಅಣೆಕಟ್ಟು ಕೇವಲ ನೀರಿನ ಸಂಗ್ರಹ ಕೇಂದ್ರವಲ್ಲ, ಅದು ರೈತರ ಜೀವನಾಡಿ ಎಂದು ಹೇಳಿದರು. ಅಣೆಕಟ್ಟಿನ ಗೇಟ್‌ಗಳ ನವೀಕರಣವು ನೀರಿನ ಸೋರಿಕೆ ತಡೆದು ಸಂಗ್ರಹ ಸಾಮರ್ಥ್ಯವನ್ನು ಹೆಚ್ಚಿಸಲಿದೆ ಎಂದು ತಿಳಿಸಿದರು.

ರೈತ ಮುಖಂಡರು ಸಲ್ಲಿಸಿದ ಮನವಿಯಂತೆ 33 ಟಿಎಂಸಿ ನೀರಿನ ಸಂರಕ್ಷಣೆ ಕುರಿತಂತೆ ಗಂಭೀರ ಚರ್ಚೆ ನಡೆದಿದ್ದು, ನವಲಿ ಸಮನಾಂತರ ಜಲಾಶಯ ನಿರ್ಮಾಣ, ಹೂಳೆತ್ತುವಿಕೆ ಹಾಗೂ ನೀರು ನಿರ್ವಹಣೆಯ ಸುಧಾರಣೆ ಸೇರಿದಂತೆ ಹಲವು ಕ್ರಮಗಳ ಬಗ್ಗೆ ಒಮ್ಮತ ಮೂಡಿದೆ ಎಂದರು. ಮೂರು ರಾಜ್ಯಗಳ ಮುಖ್ಯಮಂತ್ರಿಗಳು ಹಾಗೂ ಕೇಂದ್ರ ಸಚಿವರ ನಡುವೆ ನಡೆದ ಚರ್ಚೆ ಸಹಕಾರಾತ್ಮಕ ಜಲ ನಿರ್ವಹಣೆಯ ಮಾದರಿಯಾಗಿ ಇತಿಹಾಸದಲ್ಲಿ ದಾಖಲಾಗಲಿದೆ ಎಂದು ಅವರು ಅಭಿಪ್ರಾಯಪಟ್ಟರು. ನೀರಿನ ಸಮರ್ಪಕ ಹಂಚಿಕೆ ಮತ್ತು ರೈತರ ಹಿತಾಸಕ್ತಿಯೇ ಸಭೆಯ ಪ್ರಮುಖ ಉದ್ದೇಶವಾಗಿತ್ತು.

ರೈತನ ಪರಿಶ್ರಮವನ್ನು ಸ್ಮರಿಸಿದ ಅವರು, "ರೈತನು ದಿನರಾತ್ರಿ ಶ್ರಮಿಸಿ ದೇಶಕ್ಕೆ ಅನ್ನ ನೀಡುತ್ತಾನೆ. ಅವನಿಗೆ ಸಂಬಳವಿಲ್ಲ, ಪಿಂಚಣಿಯಿಲ್ಲ, ರಜೆ ಇಲ್ಲ. ಅಂತಹ ಅನ್ನದಾತನ ರಕ್ಷಣೆ ಸರ್ಕಾರದ ಮೊದಲ ಕರ್ತವ್ಯ" ಎಂದು ಹೇಳಿದರು.

ಈ ಕಾರ್ಯಕ್ರಮವು ತುಂಗಭದ್ರಾ ನದಿ ತಟದ ರೈತರಲ್ಲಿ ಹೊಸ ವಿಶ್ವಾಸ ಮೂಡಿಸಿದ್ದು, ಭವಿಷ್ಯದಲ್ಲಿ ನೀರಾವರಿ ವ್ಯವಸ್ಥೆ ಇನ್ನಷ್ಟು ಬಲಗೊಳ್ಳಲಿದೆ ಎಂಬ ನಿರೀಕ್ಷೆ ವ್ಯಕ್ತವಾಗಿದೆ.

## ತಮಿಳುನಾಡು ಸರ್ಕಾರಿ ಆಸ್ಪತ್ರೆಗಳಲ್ಲಿ ಜನಿಸುವ ಮಗುವಿಗೆ ಒಂದು ಗ್ರಾಂ ಚಿನ್ನದುಂಗುರ

ನೈಜ್ಯ ದೇಸೆ ನ್ಯೂಸ್

**ಚೆನ್ನೈ: ಚುನಾವಣಾ ಪ್ರಣಾಳಿಕೆಯಲ್ಲಿ ಘೋಷಣೆ ಮಾಡಿದಂತೆ ತಮಿಳುನಾಡಿನಲ್ಲಿ ದಳಪತಿ ವಿಜಯ್ ನೇತೃತ್ವದ ಸರ್ಕಾರವು ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ಜನಿಸುವ ಪ್ರತಿಯೊಂದು ನವಜಾತ ಶಿಶುವಿಗೆ 1 ಗ್ರಾಂ ಚಿನ್ನದ ಉಂಗುರವನ್ನು ಉಚಿತವಾಗಿ ನೀಡುವ ತೈಮಾಮನ್ ತಂಗ ಮೋತಿರಾಂ ತಿಟ್ಟಂ ಎಂಬ ಐತಿಹಾಸಿಕ ಯೋಜನೆಯನ್ನು ಪ್ರಕಟಿಸಿದೆ.**



ತಮಿಳುನಾಡಿನಲ್ಲಿ ಶಾಶ್ವತವಾಗಿ ವಾಸಿಸುತ್ತಿರುವ ಸರ್ಕಾರಿ ಆಸ್ಪತ್ರೆಗಳಲ್ಲಿ ಜನಿಸುವ ಎಲ್ಲಾ ಮಕ್ಕಳಿಗೆ ಈ ಯೋಜನೆ ಅನ್ವಯಿಸುತ್ತದೆ. ಮುಖ್ಯಮಂತ್ರಿ ವಿಜಯ್ ಅವರ ಜನ್ಮದಿನವಾದ ಜೂನ್ 22 ರಿಂದ ಪೂರ್ವಾನ್ವಯವಾಗುವಂತೆ ಈ ಯೋಜನೆ ಜಾರಿಗೆ ಬರಲಿದೆ. ಮಾಜಿ ಮುಖ್ಯಮಂತ್ರಿ ಸಿ.ಎನ್. ಅಣ್ಣಾದುರೈ ಅವರ ಜನ್ಮದಿನವಾದ ಸೆಪ್ಟೆಂಬರ್ 15 ರಂದು ಈ ಯೋಜನೆಗೆ ಅಧಿಕೃತವಾಗಿ ಚಾಲನೆ ಸಿಗಲಿದೆ.ಪ್ರಸ್ತುತ ಮಾರುಕಟ್ಟೆ ದರದ ಪ್ರಕಾರ ಸುಮಾರು 13,600 ರೂ. ಮೌಲ್ಯದ 1 ಗ್ರಾಂ ಚಿನ್ನದ ಉಂಗುರವನ್ನು ಶಿಶುಗಳಿಗೆ ನೀಡಲಾಗುತ್ತದೆ.

## ಸಂವಿಧಾನ ಹತ್ಯಾ ದಿವಸ್ ಆಚರಣೆಗೆ ಕರೆ

ನೈಜ್ಯ ದೇಸೆ ನ್ಯೂಸ್

**ನವದೆಹಲಿ: 1975ರಲ್ಲಿ ಹೇರಲಾಗಿದ್ದ ದೇಶದ ತುರ್ತು ಪರಿಸ್ಥಿತಿಯ ದಿನವನ್ನು ಪ್ರಧಾನಿ ನರೇಂದ್ರ ಮೋದಿ ಅವರು "ಸಂವಿಧಾನ ಹತ್ಯಾ ದಿವಸ್" (ಸಂವಿಧಾನ ಕೊಲೆ ದಿನ) ಎಂದು ಉಲ್ಲೇಖಿಸಿದ್ದಾರೆ. ಭಾರತದ ಪ್ರಜಾಪ್ರಭುತ್ವದ ಇತಿಹಾಸದಲ್ಲೇ ಇದು ಅತ್ಯಂತ ಕರಾಳ ಅಧ್ಯಾಯವಾಗಿದ್ದು, ನಾಗರಿಕರು ಸದಾ ಜಾಗೃತರಾಗಿ ಪ್ರಜಾಪ್ರಭುತ್ವವನ್ನು ರಕ್ಷಿಸಬೇಕು ಎಂದು ಅವರು ಕರೆ ನೀಡಿದ್ದಾರೆ.**

ಈ ಕುರಿತು ಎಕ್ಸ್ (ಟ್ವಿಟರ್) ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಪ್ರಧಾನಿ, "1975ರ ಜೂನ್ 25ರಂದು ಭಾರತೀಯ ಪ್ರಜಾಪ್ರಭುತ್ವವನ್ನು



ಕ್ರೂರವಾಗಿ ಹತ್ತಿಕ್ಕಲಾಗಿತ್ತು. ಆ ಕರಾಳ ದಿನದ ನೆನಪು ನಮ್ಮ ಸಂವಿಧಾನ, ಪ್ರಜಾಪ್ರಭುತ್ವ ಮತ್ತು ನಾಗರಿಕರ ಹಕ್ಕುಗಳನ್ನು ಸದಾ ರಕ್ಷಿಸಲು ನಮಗೆ ಪ್ರೇರಣೆ ನೀಡುತ್ತದೆ. ತುರ್ತು ಪರಿಸ್ಥಿತಿಯನ್ನು ಧೈರ್ಯದಿಂದ ವಿರೋಧಿಸಿದ ಎಲ್ಲಾ ಮಹನೀಯರಿಗೆ ನನ್ನ ಗೌರವಪೂರ್ವಕ ನಮನಗಳು" ಎಂದು ಬರೆದುಕೊಂಡಿದ್ದಾರೆ.

ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಕೂಡ ಕಾಂಗ್ರೆಸ್ ಸರ್ಕಾರದ ಅಂದಿನ ನಡೆಯನ್ನು ತೀವ್ರವಾಗಿ ಖಂಡಿಸಿದ್ದಾರೆ. "ತುರ್ತು ಪರಿಸ್ಥಿತಿಯ ಅವಧಿಯಲ್ಲಿ ದೇಶದ ಕೋಟ್ಯಂತರ ನಾಗರಿಕರ ಮೂಲಭೂತ ಹಕ್ಕುಗಳನ್ನು ಕಸಿದುಕೊಳ್ಳಲಾಗಿತ್ತು ಮತ್ತು ವಾಕ್ ಸ್ವಾತಂತ್ರ್ಯವನ್ನು ಸಂಪೂರ್ಣವಾಗಿ ಹತ್ತಿಕ್ಕಲಾಗಿತ್ತು" ಎಂದು ಅವರು ನೆನಪಿಸಿಕೊಂಡಿದ್ದಾರೆ. ಇದೇ ವೇಳೆ, ಪ್ರಧಾನಿ ಮೋದಿ ಅವರ ನಾಯಕತ್ವದಲ್ಲಿ ದೇಶದಲ್ಲಿ ಪ್ರಜಾಪ್ರಭುತ್ವದ ಮೌಲ್ಯಗಳು ಸುರಕ್ಷಿತವಾಗಿವೆ ಎಂದು ಅವರು ಶ್ಲಾಘಿಸಿದರು.

ಏನಿದು 1975ರ ತುರ್ತು ಪರಿಸ್ಥಿತಿ ಹಿನ್ನೆಲೆ ಅಂದಿನ ಪ್ರಧಾನಿ ಇಂದಿರಾ ಗಾಂಧಿ ಅವರ ಶಿಫಾರಸಿನ ಮೇರೆಗೆ ರಾಷ್ಟ್ರಪತಿ ಫಕ್ರುದ್ದೀನ್ ಅಲಿ ಅಹ್ಮದ್ ಅವರು ಸಂವಿಧಾನದ 352ನೇ ವಿಧಿಯಡಿ "ಆಂತರಿಕ ಅಶಾಂತಿ"ಯ ಕಾರಣ ನೀಡಿ ದೇಶದಲ್ಲಿ ತುರ್ತು ಪರಿಸ್ಥಿತಿ ಘೋಷಿಸಿದ್ದರು. ಇದು 1975ರ ಜೂನ್ 25ರಿಂದ 1977ರ ಮಾರ್ಚ್ 21ರವರೆಗೆ (ಒಟ್ಟು 21 ತಿಂಗಳು) ಜಾರಿಯಲ್ಲಿತ್ತು.

ಪ್ರಮುಖ ಪರಿಣಾಮಗಳು : ಹಕ್ಕುಗಳ ಹರಣ: ಸಂವಿಧಾನದ ವಿಧಿ 14, 19, 21 ಮತ್ತು 22ರ ಅಡಿಯಲ್ಲಿ ಸಿಗುವ ನಾಗರಿಕರ ಮೂಲಭೂತ ಹಕ್ಕುಗಳನ್ನು ಅಮಾನತುಗೊಳಿಸಲಾಯಿತು. ಜಯಪ್ರಕಾಶ್ ನಾರಾಯಣ್, ಅಟಲ್ ಬಿಹಾರಿ ವಾಜಪೇಯಿ ಸೇರಿದಂತೆ ವಿರೋಧ ಪಕ್ಷದ ಪ್ರಮುಖ ನಾಯಕರನ್ನು ಜೈಲಿಗಟ್ಟಲಾಯಿತು. ಪತ್ರಿಕೆಗಳು ಮತ್ತು ಮಾಧ್ಯಮಗಳ ಸ್ವಾತಂತ್ರ್ಯದ ಮೇಲೆ ಕಠಿಣ ನಿಯಂತ್ರಣ ಹೇರಲಾಯಿತು. ಸರ್ಕಾರದ ಅನುಮತಿಯಿಲ್ಲದೆ ಯಾವುದೇ ಸುದ್ದಿ ಪ್ರಕಟಿಸುವಂತಿರಲಿಲ್ಲ.

## ಎಂಎಲ್ಸಿ ತಿಪ್ಪಣ್ಣಪ್ಪ ಕಮಕನೂರುಗೆ ಸಚಿವ ನೀಡುವಂತೆ ಒತ್ತಾಯ

ನೈಜ್ಯ ದೇಸೆ ನ್ಯೂಸ್

**ಬಳ್ಳಾರಿ / ಕಂಪ್ಲಿ : ಸತತ ಮೂರು ಬಾರಿ ಕರ್ನಾಟಕ ವಿಧಾನ ಪರಿಷತ್ ಸದಸ್ಯರಾಗಿರುವ ಗಂಗಾಮತ ಸಮಾಜದ ತಿಪ್ಪಣ್ಣಪ್ಪ ಕಮಕನೂರು ಇವರಿಗೆ ಕಾಂಗ್ರೆಸ್ ವರಿಷ್ಠರು ಸಚಿವ ಸ್ಥಾನ ನೀಡಬೇಕೆಂದು ಎಮ್ಮಿಗನೂರು ಗಂಗಾಪರಮೇಶ್ವರಿ ಸೇವಾ ಸಮಿತಿ ಅಧ್ಯಕ್ಷ ಕಾಗಿ ಈರಣ್ಣ ಒತ್ತಾಯಿಸಿದರು.**



ತಾಲೂಕಿನ ಎಮ್ಮಿಗನೂರು ಗ್ರಾಮದ ಗಂಗಾಮತ ಸಮಾಜದ ಗಂಗಾದೇವಿ ದೇವಸ್ಥಾನದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಎಮ್ಮಿಗನೂರು, ಕಂಪ್ಲಿ ಸೇರಿದಂತೆ ರಾಜ್ಯದಲ್ಲಿ ಸುಮಾರು 40 ಲಕ್ಷಕ್ಕೂ ಹೆಚ್ಚು ಗಂಗಾಮತ(ಬೆಸ್ತರ) ಜನಸಂಖ್ಯೆ ಇದ್ದಾರೆ. ಈ ಸಮಾಜವು ಶೈಕ್ಷಣಿಕ, ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯವಾಗಿ ಹಿಂದುಳಿದಿದೆ. ಇಂದಿಗೂ ತಳಮಟ್ಟದಲ್ಲಿರುವ ಈ ಬಲಿಷ್ಠ ಸಮಾಜವು ಪ್ರಗತಿಯ ಪಥದತ್ತ ಮುನ್ನುಗ್ಗಲು, ಸಮಾಜದ ಧ್ವನಿಯಾಗಿ ರಾಜ್ಯ ಮಟ್ಟದಲ್ಲಿ ಕೆಲಸ ನಿರ್ವಹಿಸಲು ರಾಜಕೀಯ ಚತುರನ ಅವಶ್ಯಕತೆ ಇದೆ. ಆದ್ದರಿಂದ ಎಂಎಲ್ಸಿ ತಿಪ್ಪಣ್ಣಪ್ಪ ಕಮಕನೂರುಗೆ ಸಚಿವ ಸ್ಥಾನ ನೀಡಲೇಬೇಕು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಉಪಾಧ್ಯಕ್ಷ ಗುಂಡ್ರಾಣಿ ಜಡೆಪ್ಪ, ಕಾರ್ಯದರ್ಶಿ ಲಬೇದ್ ಜಡೆಪ್ಪ, ಖಜಾಂಚಿ ಬಿ.ಈರಣ್ಣ, ಸಂಚಾಲಕ ಡಿ.ಹುಲುಗಪ್ಪ, ಸದಸ್ಯರಾದ ಬಿ.ವೆಂಕಟೇಶ, ಸಣ್ಣ ಜಡೆಪ್ಪ, ಕೆ.ದರ್ಮಣ್ಣ, ಜಗನಪ್ಪ, ಎಸ್. ಮಾರೆಪ್ಪ, ಹೆಚ್.ರಾಮಾಂಜಿನಿ, ಯು.ನಾಗಪ್ಪ, ಎಸ್.ಮಹೇಶ, ಎ.ಬಾಸ್ಕರ, ಬಿ.ಎಂ. ರೇಣುಕಾನಂದ ಸೇರಿದಂತೆ ಸಮಾಜದವರು ಇದ್ದರು.

## ಅಂಚೆ ಜೀವ ವಿಮೆ ಉತ್ಪನ್ನಗಳ ಮಾರಾಟ ಪ್ರತಿನಿಧಿಗಳ ಆಯ್ಕೆಗೆ ನೇರ ಸಂದರ್ಶನ

ನೈಜ್ಯ ದೇಸೆ ನ್ಯೂಸ್

**ರಾಯಚೂರು ಜೂನ್ 25 (ಕರ್ನಾಟಕ ವಾರ್ತೆ): ಇಲ್ಲಿನ ಅಂಚೆ ಇಲಾಖೆಯಿಂದ ರಾಯಚೂರು ವಿಭಾಗದಲ್ಲಿ ಅಂಚೆ ಜೀವ ವಿಮೆ ಹಾಗೂ ಗ್ರಾಮೀಣ ಅಂಚೆ ಜೀವ ವಿಮೆ ಉತ್ಪನ್ನಗಳನ್ನು ಮಾರಾಟ ಮಾಡಲು ನೇರ ಪ್ರತಿನಿಧಿಗಳ ಆಯ್ಕೆಗಾಗಿ ನೇರ ಸಂದರ್ಶನಕ್ಕೆ ಆಸಕ್ತ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.**

ನೇರ ಸಂದರ್ಶನ

ಜುಲೈ 06ರ ಬೆಳಿಗ್ಗೆ 11ಗಂಟೆಗೆ ರಾಯಚೂರಿನ ಗಂಜ್ ವೃತ್ತದ ಬಳಿರುವ ಅಂಚೆ ಅಧೀಕ್ಷಕರ ಕಚೇರಿಯಲ್ಲಿ ನೇರ ಸಂದರ್ಶನ ಹಮ್ಮಿಕೊಳ್ಳಲಾಗಿದೆ. ಸಂದರ್ಶನಕ್ಕೆ ಹಾಜರಾಗುವ ಅಭ್ಯರ್ಥಿಗಳು 10ನೇ ತರಗತಿ ಪಾಸಾಗಿದ್ದು, ಕನಿಷ್ಠ 18 ಆಗಿರಬೇಕು. ನಿರುದ್ಯೋಗಿ, ಸ್ವಯಂ ಉದ್ಯೋಗ ನಿರತ ಯುವಕರು, ವಿಮಾ ಕಂಪನಿಗಳ ಮಾಜಿ ಏಜೆಂಟರು, ಸಲಹೆಗಾರರು, ಮಾಜಿ ಸೈನಿಕರು, ಅಂಗನವಾಡಿ ಕಾರ್ಯಕರ್ತೆಯರು, ಮಹಿಳಾ ಮಂಡಳದ ಕಾರ್ಯಕರ್ತೆಯರು, ನಿವೃತ್ತ ಪ್ರಧಾನ ಮತ್ತು ಗ್ರಾಮ ಪಂಚಾಯತ್ ಸದಸ್ಯರು ಹಾಗೂ ಅಂಚೆ ವಿಭಾಗದ ಮುಖ್ಯಸ್ಥರಿಗೆ ಸಮಂಜಸವೆಂದು ಕಂಡುಬಂದ ಯಾವುದೇ ಅಭ್ಯರ್ಥಿಗಳನ್ನು ಆಯ್ಕೆ ಮಾಡಿಕೊಳ್ಳಲಾಗುತ್ತದೆ.

ನುರಿತ, ಸಂವಹನಾ ಕಲೆ ಹಾಗೂ ವಿಮಾ ಮಾರಾಟ ಕ್ಷೇತ್ರದಲ್ಲಿ ಪೂರ್ವಾನುಭವ ಹೊಂದಿರುವವರಿಗೆ ಆದ್ಯತೆ ನೀಡಲಾಗುತ್ತಿದೆ. ಆಯ್ಕೆಯಾದ ಅಭ್ಯರ್ಥಿಗಳು 5 ಸಾವಿರ ರೂ.ಗಳ ರಾಷ್ಟ್ರೀಯ ಉಳಿತಾಯ ಪತ್ರ ಅಥವಾ ಕಿಸಾನ್ ವಿಕಾಸ ಪತ್ರದ ರೂಪದಲ್ಲಿ ಭದ್ರತಾ ಠೇವಣಿ ಇಡಬೇಕು. ಆಯ್ಕೆಯಾದ ಪ್ರತಿನಿಧಿಗಳಿಗೆ ವ್ಯವಹಾರಕ್ಕೆ ತಕ್ಕಂತೆ ಸೂಕ್ತ ಕಮಿಷನ್ ನೀಡಲಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ಹತ್ತಿರದ ಅಂಚೆ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ ಎಂದು ರಾಯಚೂರು ವಿಭಾಗದ ಅಂಚೆ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಂಪ್ಲಿಯಲ್ಲಿ ಮೊಹರಂ ಹಬ್ಬಕ್ಕೆ ಹುಲಿವೇಷ ಜೋರು

ನೈಜ್ಯ ದೇಸೆ ನ್ಯೂಸ್

**ಬಳ್ಳಾರಿ / ಕಂಪ್ಲಿ : ಮೊಹರಂ ಹಿಂದೂ-ಮುಸ್ಲಿಂ ಭಾವೈಕ್ಯದ ಹಬ್ಬವಾಗಿ ಇಂದಿಗೂ ತನ್ನ ಆಚರಣೆ, ಪರಂಪರೆ ಮತ್ತು ಸಾಂಸ್ಕೃತಿಕ ವೈಭವವನ್ನು ಉಳಿಸಿಕೊಂಡು ಬಂದಿದೆ. ಮೊಹರಂ ಹಬ್ಬದಂದು ದೇವರಿಗೆ (ಪಂಜಾ) ವಿವಿಧ ರೀತಿಯ ಹರಕೆಗಳನ್ನು ಹೊತ್ತುಕೊಳ್ಳುವುದು ಹಿಂದಿನಿಂದ ಬಂದ ಸಂಪ್ರದಾಯ. ಸಂತಾನಭಾಗ್ಯ, ಕುಟುಂಬದ ಆರೋಗ್ಯ ಸಮಸ್ಯೆ ಪರಿಹಾರ ಹೀಗೆ ಹತ್ತಾರು ಸಮಸ್ಯೆಗಳ ನಿವಾರಣೆಗಾಗಿ ದೇವರ ಮೇಲೆ ಅಚಲವಾದ ನಂಬಿಕೆಯಿಂದ ಭಕ್ತರು ಹರಕೆ ಹೊತ್ತುಕೊಳ್ಳುತ್ತಾರೆ. ಇಂಥ ಹರಕೆಗಳಲ್ಲಿ ಹುಲಿವೇಷ ಬರೆಸಿಕೊಳ್ಳುವುದೂ ಸೇರಿದೆ.**



"ಹುಲಿ ವೇಷವನ್ನು ಬರೆಸಿಕೊಂಡ ನನ್ನ ಮಗ ಹುಲಿಯ ಹಾಗೆ ಆಗಲಿ, ಆರೋಗ್ಯವಂತನಾಗಲಿ, ಜೀವನದಲ್ಲಿ ಉಜ್ವಲ ಭವಿಷ್ಯವನ್ನು ಕಾಣಲಿ' ಎಂದು ದೇವರಿಗೆ 5, 11, 21 ವರ್ಷ ಅಥವಾ ಜೀವಂತ ಇರುವವರೆಗೂ ಹುಲಿವೇಷ ಬರೆಸುತ್ತೇವೆ" ಎಂದು ಹಲವು ಪೋಷಕರು ಹರಕೆ ಕಟ್ಟುತ್ತಾರೆ. ಅದರಂತೆ ಪ್ರತಿವರ್ಷ ಮೊಹರಂ ಹಬ್ಬ ಬಂದಾಗ ಹುಲಿವೇಷ ಬರೆಸಿಕೊಳ್ಳುವುದರ ಮೂಲಕ ಹರಕೆ ಪೂರೈಸುತ್ತಾರೆ.

ಹುಲಿವೇಷ ಬರೆಯುವುದೂ ಒಂದು ವಿಶಿಷ್ಟ ಕಲೆ: ಕಂಪ್ಲಿ ತಾಲ್ಲೂಕಿನಾದ್ಯಂತ ಹುಲಿವೇಷ ಬರೆಸಿಕೊಳ್ಳುವವರ ಸಂಖ್ಯೆಗೇನೂ ಕಡಿಮೆ ಇಲ್ಲ. ನೂರಾರು ಜನರು ಹುಲಿವೇಷ ಬರೆಸಿಕೊಂಡು ಚರ್ಮದ ಹಲಿಗೆ ಅಥವಾ ತಮಟೆ ವಾದನಕ್ಕೆ ತಕ್ಕಂತೆ ಹೆಜ್ಜೆ ಹಾಕಿ ಕಾಣಿಕೆ ಪಡೆದುಕೊಳ್ಳುತ್ತಾರೆ. ಕಂಪ್ಲಿ ಪಟ್ಟಣದ ಚಿತ್ರಗಾರ ಕುಟುಂಬ ಕಳೆದ ನಾಲ್ಕು ತಲೆಮಾರುಗಳಿಂದ ಭಕ್ತಿ, ಶ್ರದ್ಧೆ, ನಂಬಿಕೆ ಹಾಗೂ ಸಾಂಪ್ರದಾಯಕವಾಗಿ ಹುಲಿವೇಷ ಬರೆಯುತ್ತ ಬಂದಿದೆ. ಚಿತ್ರಗಾರ ಕುಟುಂಬದ ಸದಸ್ಯರು ಹುಲಿವೇಷ ಬರೆಯುವುದನ್ನು ರೂಢಿ ಮಾಡಿಕೊಂಡಿದ್ದಾರೆ. ತಮ್ಮದೇ ಆದ ವಿಶಿಷ್ಟ ಶೈಲಿಯಲ್ಲಿ ಸಾಂಪ್ರದಾಯಿಕ ಬಣ್ಣಗಳನ್ನು ಬಳಸಿ ಆಲಂಕಾರಿಕವಾಗಿ ಚಿತ್ರಗಳನ್ನು, ಸುಳಿವುಗಳನ್ನು ಹಳದಿ, ಕೆಂಪು, ಹಸಿರು, ಕರಿ ಮುಖ್ಯ ಬಣ್ಣಗಳಾಗಿ ಬಳಸಿಕೊಂಡು ಹುಲಿವೇಷ ಬರೆಯುವುದರಲ್ಲಿ ನುರಿತಿದ್ದಾರೆ.

'ನಾಲ್ಕು ತಲೆಮಾರಿನಿಂದ ನಮ್ಮ ಕುಟುಂಬದವರು ಮೊಹರಂ ಹಬ್ಬದಂದು ಹುಲಿವೇಷ ಬರೆಯುತ್ತಾ ಬಂದಿದ್ದೇವೆ. ನಮ್ಮ ಕುಟುಂಬದವರಾದ ಚಿತ್ರಗಾರ್ ಶೀಲಾ ಬಾಯಿ, ಚಿತ್ರಗಾರ ರಾಧಾಬಾಯಿ, ಚಿತ್ರಗಾರ ಸತೀಶ್ ಬಾಬು ಸೇರಿದಂತೆ ಶಾರದಮ್ಮ ಮನೆಯವರು ಈ ಕಾಯಕ ನಡೆಸಿಕೊಂಡು ಬಂದಿದ್ದೇವೆ, ಹಿಂದೆ ಹರಕೆ ಹೊತ್ತವರು ಇಡೀ ದೇಹಕ್ಕೆ ಹುಲಿವೇಷ ಬರೆಸಿಕೊಂಡು ಹರಕೆ ಪೂರೈಸುತ್ತಾರೆ. ಇವತ್ತಿನ ದುಬಾರಿ ಕಾಲದಲ್ಲಿ ನಮಗೆ ಆರ್ಥಿಕವಾಗಿ ಹೊಡೆತ ಬಿದ್ದಿದೆ' ಎನ್ನುತ್ತಾರೆ ಹುಲಿವೇಷ ಬರೆಯುವ ಕಲಾವಿದ ಚಿತ್ರಗಾರ ಪ್ರಸಾದ ಯಾವದೇ ಕೆಡಕುಗಳು ತಾಗದಿರಲಿ ದೈವದ ಆಶೀರ್ವಾದ ಇರಲಿ ಎಂದು ಬೇಡಿಕೊಳ್ಳುತ್ತಾರೆ.

## ಸಾಹಿತ್ಯ ಸಿಂಚನ

### ಲೆಕ್ಕ..!

ಬೀಸುವ ಆ ಗಾಳಿ
ನನ್ನ ಉಸುರಿಗೆಷ್ಟು
ಕೊಟ್ಟೆನೆಂದು...
ಎಣಿಕೆಯಿಡುವುದೆ..?

ಹರಿವ ಆ ನದಿ
ನಾನೆಷ್ಟು ಬೊಗಸೆ
ಕುಡಿದೆನೆಂದು..
ಲೆಕ್ಕವಿಡುವುದೆ..?

ಬೆಳೆವ ಆ ಭೂಮಿ
ನಾನೆಷ್ಟು ಕಾಳು
ತಿಂದೆನೆಂದು..
ಬರೆದಿಡುವುದೆ..?

ಆ ರವಿ ಆ ಚಂದ್ರ
ಬಿಸಿಲು ಬೆಳದಿಂಗಳ
ನಾ ಹೀರಿದ್ದೆಷ್ಟೆಂದು
ಎಣಿಕೆ ಮಾಡುವವೆ.?

ಆ ಮರ-ಗಿಡಗಳು
ಕೊಟ್ಟ ಫಲವನು
ಇಟ್ಟ ನೆರಳನು
ಲೆಕ್ಕ ಹಾಕುವವೆ..?

ನಿಸರ್ಗ ನೀತಿಯಲಿ
ಪ್ರಕೃತಿ ಪ್ರೀತಿಯಲಿ
ಸೃಷ್ಟಿ ಸಂಪ್ರೀತಿಯಲಿ
ಎಲ್ಲಿಹುದು ಲೆಕ್ಕ..?

ನನದು ನಿಮದಷ್ಟೇ
ಅಡಿಗಡಿಗೂ ಲೆಕ್ಕ..!
ಅನುದಿನ ಅನುಕ್ಷಣ
ಎಲ್ಲದಕು ಪಕ್ಕಾ ಲೆಕ್ಕ.!

ಆ ಬುವಿ ರವಿ ಕಡಲು
ಗಿರಿ ವೃಕ್ಷ ಹೊನಲು
ಎಲ್ಲದರಲು ಔದಾರ್ಯ
ಇಲ್ಲ ಲೆಕ್ಕದ
ಚಾತುರ್ಯ.!

ನಿತ್ಯ ನನದು ನಿಮದಷ್ಟೆ
ಸಂಕುಚಿತತೆಯ ಲೆಕ್ಕ.!
ನಮಗೆ ಪಡೆವುದಕಿಲ್ಲ
ಲೆಕ್ಕ.!!
ಕೊಡುವುದಕ್ಕಷ್ಟೇ
ಲೆಕ್ಕ..!!!

ಇಟ್ಟ ಪ್ರತಿ ಹನಿ-ಹನಿಗೂ
ಕೊಟ್ಟ ಪ್ರತಿ ತುತ್ತು-
ತುತ್ತಿಗೂ
ಕಂಬನಿ ಬೆವರು ನೆತ್ತರು
ಎಲ್ಲದಕೂ ಲೆಕ್ಕ ಲೆಕ್ಕ
ಲೆಕ್ಕ.!

ಎ.ಎನ್.ರಮೇಶ್. ಗುಬ್ಬಿ.

## ವಿಶೇಷ ಮತದಾರರ ಪಟ್ಟಿಯ ಪರಿಷ್ಕರಣೆ (SIR) ಕುರಿತು ತರಬೇತಿ ಕಾರ್ಯಾಗಾರ ಆಯೋಜನೆ-ತಹಶೀಲ್ದಾರ್ ಅರುಣ್ ದೇಸಾಯಿ

ನೈಜ್ಯ ದೆಸೆ ನ್ಯೂಸ್

**ಸಿಂಧನೂರು : ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ವಿಶೇಷ ಮತದಾರರ ಪಟ್ಟಿಯ ಪರಿಷ್ಕರಣೆ (ಖಠಿಜ-ಛಿಚಿಟ ಖಟಿಣಜಟಿಥಿತಜ ಖಜತ್ರುಠಟಿ – ಖಋಖ) ಕಾರ್ಯಕ್ರಮದ ಅಂಗವಾಗಿ ಎಲ್ಲಾ ರಾಜಕೀಯ ಪಕ್ಷಗಳ ಬೂತ್ ಮಟ್ಟದ ಏಜೆಂಟರು (ಃಐಂ) ಹಾಗೂ ಬೂತ್ ಮಟ್ಟದ ಅಧಿಕಾರಿಗಳಿಗೆ (ಃಐಔ) ತರಬೇತಿ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಯಿತು.**

ಕಾರ್ಯಾಗಾರದಲ್ಲಿ ಮತದಾರರ ಗಣತಿ ನಮೂನೆಗಳನ್ನು (ಇಟಿಣಟಜಡಿಚಿ-ಣಖಂಟ ಈಠಡಿಥ) ಸರಿಯಾಗಿ ಭರ್ತಿ ಮಾಡುವ ವಿಧಾನ, ಮೃತ ಮತದಾರರ ಹೆಸರುಗಳನ್ನು ಮತದಾರರ ಪಟ್ಟಿಯಿಂದ ತೆಗೆದುಹಾಕುವುದು,




ಶಾಶ್ವತವಾಗಿ ಬೇರೆ ಸ್ಥಳಕ್ಕೆ ಸ್ಥಳಾಂತರಗೊಂಡಿರುವ ಮತದಾರರ ವಿವರಗಳನ್ನು ದಾಖಲಿಸುವುದು, ಗೈರುಹಾಜರಾಗಿರುವ ಮತದಾರರ ಮಾಹಿತಿಯನ್ನು ಪರಿಶೀಲಿಸುವುದು ಸೇರಿದಂತೆ ಮತದಾರರ ಪಟ್ಟಿಯ ಶುದ್ಧೀಕರಣಕ್ಕೆ ಸಂಬಂಧಿಸಿದ ವಿವಿಧ ವಿಷಯಗಳ ಕುರಿತು ವಿವರವಾದ ಮಾಹಿತಿ ನೀಡಲಾಯಿತು. ಕಾರ್ಯಾಗಾರದಲ್ಲಿ ಭಾಗವಹಿಸಿದ್ದ ಎಲ್ಲಾ ರಾಜ-ಕೀಯ ಪಕ್ಷಗಳ ಪ್ರತಿನಿಧಿಗಳು ಹಾಗೂ ಅಧಿಕಾ-ರಿಗಳು ತಮ್ಮ ಸಂದೇಹಗಳನ್ನು ನಿವಾ-ರಿಸಿಕೊಳ್ಳುವ ಅವಕಾಶವನ್ನು ಪಡೆದುಕೊಂಡರು.

ಮತದಾರರ ಪಟ್ಟಿಯ ಪರಿಷ್ಕರಣೆ ಪ್ರಕ್ರಿಯೆಯನ್ನು ಯಶಸ್ವಿಯಾಗಿ ಹಾಗೂ ಪಾರದರ್ಶಕವಾಗಿ ನಡೆಸಲು ಎಲ್ಲರ ಸಹಕಾರ ಅಗತ್ಯವಾಗಿದೆ ಎಂದು ತಿಳಿಸಲಾಯಿತು. ಈ ಕುರಿತು ಮಾತನಾಡಿದ ತಹಶೀಲ್ದಾರ್ ಸಿಂಧನೂರು ಅವರು, "ಮತದಾರರ ಪಟ್ಟಿಯನ್ನು ಶುದ್ಧ, ನಿಖರ ಹಾಗೂ ಪಾರದರ್ಶಕವಾಗಿಸಲು ವಿಶೇಷ ಮತದಾರರ ಪಟ್ಟಿಯ ಪರಿಷ್ಕರಣೆ ಕಾರ್ಯ ಕೈಗೊಳ್ಳಲಾಗಿದೆ. ಬೂತ್ ಮಟ್ಟದ ಅಧಿಕಾರಿಗಳು (ಃಐಔ) ಮನೆಗಳಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಸಾರ್ವಜನಿಕರು ಅಗತ್ಯ ಮಾಹಿತಿಯನ್ನು ಒದಗಿಸಿ ಸಂಪೂರ್ಣ ಸಹಕಾರ ನೀಡಬೇಕು. ಮೃತ, ಶಾಶ್ವತವಾಗಿ ಸ್ಥಳಾಂತರಗೊಂಡ ಹಾಗೂ ಅನರ್ಹ ಮತದಾರರ ಹೆಸರುಗಳನ್ನು ಪಟ್ಟಿಯಿಂದ ತೆಗೆದುಹಾಕುವ ಮೂಲಕ ನಿಖರ ಮತದಾರರ ಪಟ್ಟಿಯನ್ನು ಸಿದ್ಧಪಡಿಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ" ಎಂದು ಹೇಳಿದರು. ಸಿಂಧನೂರು ವಿಧಾನಸಭಾ ಕ್ಷೇತ್ರದ ಎಲ್ಲಾ ನಾಗರಿಕರು ಃಐಔಗಳೊಂದಿಗೆ ಸಹಕರಿಸಿ ಶುದ್ಧ ಹಾಗೂ ವಿಶ್ವಾಸಾರ್ಹ ಮತದಾರರ ಪಟ್ಟಿಯನ್ನು ರೂಪಿಸುವಲ್ಲಿ ಕೈಜೋಡಿಸುವಂತೆ ತಹಶೀಲ್ದಾರ್ ಅವರು ಮನವಿ ಮಾಡಿದರು.

## ಉತ್ತಮ ಬೆಳೆಗಳೊಂದಿಗೆ ರೈತರು ಲಾಭದಾಯದ ಜೀವನದತ್ತ ಸಾಗಬೇಕು : ಪಿ.ಮೂಕಯ್ಯಸ್ವಾಮಿ

ನೈಜ್ಯ ದೆಸೆ ನ್ಯೂಸ್

**ಕಂಪ್ಲಿ: ರೈತರು ವಿವಿಧ ಉತ್ಪನ್ನ ಯೋಜನೆಗಳ ಸದುಪಯೋಗದೊಂದಿಗೆ ಅಭಿವೃದ್ಧಿ ಹೊಂದಲು ಮುಂದಾಗಬೇಕು ಎಂದು ಅಪೇಕ್ಸ್ ಬ್ಯಾಂಕ್ ನಿರ್ದೇಶಕ ಪಿ.ಮೂಕಯ್ಯಸ್ವಾಮಿ ಹೇಳಿದರು.**

ಪಟ್ಟಣದ ವೀರಶೈವ ಭವನದಲ್ಲಿ ಶತಮಾನೋತ್ಸವ ಅಂಗವಾಗಿ ಕೋರಮಂಡಲ ಇಂಟರ್ನ್ಯಾಷನಲ್ ಲಿಮಿಟೆಡ್ ನೇತೃತ್ವದಲ್ಲಿ ಆಯೋಜಿಸಿದ್ದ ಪ್ರಚಂಡ ಮತ್ತು ಮಾರ್ವೇಕ್ಸ್ ಲಕ್ಕಿ ಡ್ರಾ ವಿಜೇತರಿಗೆ ಸನ್ಮಾನ ಹಾಗೂ ಹೊಸ ಉತ್ಪನ್ನಗಳ ಬಿಡುಗಡೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಪಟ್ಲೇಜರ್, ಡಿಎಪಿ, ಯೂರಿಯಾ, ಕಾಂಪ್ಲೆಕ್ಸ್ ಸೇರಿದಂತೆ ವಿವಿಧ ಉತ್ಪನ್ನಗಳನ್ನು ರೈತರು ಬಳಕೆ ಮಾಡುವ ಮೂಲಕ ಉತ್ತಮ ಬೆಳೆಗಳೊಂದಿಗೆ ಲಾಭದಾಯದ ಜೀವನದತ್ತ ಸಾಗಬೇಕು ಎಂದರು.



ನಂತರ ಪ್ರಾದೇಶಿಕ ವ್ಯವಹಾರ ಮುಖ್ಯಸ್ಥ ವಿನಯ ಎಸ್.ಎಸ್ ಮಾತನಾಡಿ, ಕೋರಮಂಡಲ್ ಇಂಟರ್‌ನ್ಯಾಶನಲ್ ರೈತರಿಗೆ ಉತ್ತಮ ಇಳುವರಿ ಮತ್ತು ಬೆಳೆಗಳ ಸಮಗ್ರ ಪೋಷಣೆಗಾಗಿ ಅತ್ಯುತ್ತಮ ರಸಗೊಬ್ಬರಗಳು, ಸೂಕ್ಷ್ಮ ಪೋಷಕಾಂಶಗಳು ಮತ್ತು ಸಸ್ಯ ಸಂರಕ್ಷಣಾ ಉತ್ಪನ್ನಗಳನ್ನು ಒದಗಿಸುತ್ತಿದೆ. ಮಣ್ಣಿನ ಫಲವತ್ತತೆ ಹೆಚ್ಚಿಸಲು ಮತ್ತು ಬೆಳೆಗಳ ಗುಣಮಟ್ಟವನ್ನು ಸುಧಾರಿಸಲು ಇವರ ಉತ್ಪನ್ನಗಳು ಹೆಚ್ಚು ನೆರವಾಗುತ್ತವೆ ಎಂದರು.

ಲಕ್ಕಿ ಡ್ರಾ ವಿಜೇತರಾದ ಮಂಜುನಾಥ, ಜಡೇಶ, ಶ್ರೀನಿವಾಸ, ಚನ್ನಬಸವ ಇವರಿಗೆ ಸನ್ಮಾನಿಸಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಜಿಲ್ಲಾಧ್ಯಕ್ಷ ಬಿ.ವಿ.ಗೌಡ, ಸಾಂಗಾತ್ರಯ ಸಂಸ್ಕೃತ ಪಾಠಶಾಲೆ ಅಧ್ಯಕ್ಷ ಇಟಗಿ ಬಸವರಾಜಗೌಡ, ಮಾಜಿ ಅಧ್ಯಕ್ಷ ಎಸ್.ಎಸ್.ಎಂ.ಚನ್ನಯ್ಯಸ್ವಾಮಿ, ತಾಲೂಕು ಕಾರ್ಯದರ್ಶಿ ಕೊಟ್ಟೂರು ರಮೇಶ, ನಗರ ಘಟಕ ಅಧ್ಯಕ್ಷ ತಿಮ್ಮಪ್ಪ ನಾಯಕ, ಡಿಸಿಎಂ ಡಾ.ಸೋಮಶೇಖರ ಗುಡ್ಡದಮಠ್, ಎಂಓ ಅಧಿಕಾರಿ ಅಮರೇಶಕುಮಾರ, ಕ್ಷೇತ್ರ ಸಹಾಯಕರಾದ ಪಂಪಾನಗೌಡ, ಕೊಟ್ರೇಶಪ್ಪ, ರೈತ ಮುಖಂಡರಾದ ಶರಣಪ್ಪ, ಕೆ.ತಿರುಮಲ, ವೆಂಕಟೇಶರೆಡ್ಡಿ ಸೇರಿದಂತೆ ಅನೇಕ ರೈತರಿದ್ದರು.

## ವೆನಿಜುವೆಲಾ ಭೀಕರ ಭೂಕಂಪ, ಪ್ರಧಾನಿ ಮೋದಿ ಸಂತಾಪ, ಅಗತ್ಯ ನೆರವಿನ ಭರವಸೆ

ನೈಜ್ಯ ದೆಸೆ ನ್ಯೂಸ್

**ನವದೆಹಲಿ: ಪ್ರಬಲ ಭೂಕಂಪಗಳಿಂದ ವೆನೆಜುವೆಲಾದಲ್ಲಿ ಸಂಭವಿಸಿದ ಭಾರೀ ಹಾನಿ ಮತ್ತು ಜೀವಹಾನಿ ಕುರಿತು ಪ್ರಧಾನಿ ನರೇಂದ್ರ ಮೋದಿ ಸಂತಾಪ ಸೂಚಿಸಿದ್ದಾರೆ.ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಟ್ವೀಟ್ ಮಾಡಿರುವ ಅವರು, ವೆನೆಜುವೆಲಾದಲ್ಲಿ ಸಂಭವಿಸಿದ ಭೀಕರ ಭೂಕಂಪದಿಂದ ತೀವ್ರ ದುಃಖವಾಗಿದೆ. ಈ ಸಂಕಷ್ಟದ ಸಮಯದಲ್ಲಿ ಭಾರತವು ವೆನೆಜುವೆಲಾಕ್ಕೆ ಎಲ್ಲ**



**ರೀತಿಯ ಸಹಾಯ ಮಾಡಲು ಸಿದ್ಧವಿದೆ ಎಂದು ಹೇಳಿದ್ದಾರೆ.**

ವೆನೆಜುವೆಲಾದಲ್ಲಿ ಸಂಭವಿಸಿದ ಭೀಕರ ಭೂಕಂಪದಿಂದ ಉಂಟಾದ ಭಾರೀ ಹಾನಿಯಿಂದ ನನಗೆ ತೀವ್ರ ದುಃಖವಾಗಿದೆ. ಭಾರತದ ಜನರ ಪರವಾಗಿ, ವೆನೆಜುವೆಲಾ ಸರ್ಕಾರ ಮತ್ತು ಜನತೆಗೆ, ವಿಶೇಷವಾಗಿ ತಮ್ಮ ಆತೀಯರನ್ನು ಕಳೆದುಕೊಂಡ ಕುಟುಂಬಗಳಿಗೆ ಸಂತಾಪ ಸೂಚಿಸುತ್ತೇನೆಂದು ತಿಳಿಸಿದ್ದಾರೆ. ಇದೇ ವೇಳೆ ಗಾಯಗೊಂಡವರು ಶೀಘ್ರ ಚೇತರಿಸಿಕೊಳ್ಳಲಿ ಎಂದು ಪ್ರಾರ್ಥಿಸಿರುವ ಪ್ರಧಾನಿ, ಈ ಕಠಿಣ ಸಮಯದಲ್ಲಿ ಭಾರತವು ವೆನೆಜುವೆಲಾ ಜನರೊಂದಿಗೆ ಒಟ್ಟಾಗಿ ನಿಂತಿದ್ದು, ಸಾಧ್ಯವಾದ ಎಲ್ಲ ನೆರವು ನೀಡಲು ಸಿದ್ಧವಿದೆ ಎಂದು ತಿಳಿಸಿದ್ದಾರೆ.

## ಹಸಿ ಮೆಣಸಿನ ಕಾಯಿ, ದಾಳಿಂಬೆ ಮತ್ತು ಮಾವು ಬೆಳೆ ವಿಮೆಗಾಗಿ ಅರ್ಜಿ ಸಲ್ಲಿಕೆ

ನೈಜ್ಯ ದೆಸೆ ನ್ಯೂಸ್

**ರಾಯಚೂರು ಜೂನ್ 25 (ಕರ್ನಾಟಕ ವಾರ್ತೆ): ಸರ್ಕಾರದ ನಡುವಳಿಯಂತೆ ಮರುವಿನ್ಯಾಸಗೊಳಿಸಿದ ಹವಾಮಾನ ಅಧಾರಿತ ಬೆಳೆ ವಿಮೆ (ಆರ್.ಡ್ಲೂ.ಬಿ.ಸಿ.ಐ.ಎಸ್) ಯೋಜನೆ-2026ರ ಮುಂಗಾರು ಹಂಗಾಮಿನಲ್ಲಿ ರಾಯಚೂರು ಜಿಲ್ಲೆಯ ಅಧಿಸೂಚಿತ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಬರುವ ನೀರಾವರಿ ಹಸಿ ಮೆಣಸಿನಕಾಯಿ, ದಾಳಿಂಬೆ ಹಾಗೂ ಮಾವು ಬೆಳೆಗಾರರಿಗೆ ವಿಮಾ ಕಂತು ಕಟ್ಟಲು ಜುಲೈ 31ರವರೆಗೆ ಅವಕಾಶ ನೀಡಲಾಗಿದೆ.**

ಹಸಿ ಮೆಣಸಿನಕಾಯಿ (ನೀ.) ಬೆಳೆಗೆ



ಪ್ರತಿ ಹೆಕ್ಟರ್ ವಿಮಾ ಮೊತ್ತ 71000 ರೂ. ಗಳಿದ್ದು, ವಿಮಾ ಕಂತಿನ ಮೊತ್ತ 3550 ರೂ. ಗಳಿರುತ್ತದೆ. ದಾಳಿಂಬೆ ಬೆಳೆಗೆ ಪ್ರತಿ ಹೆಕ್ಟರ್‌ಗೆ ವಿಮಾ ಮೊತ್ತ 127000 ರೂ.ಗಳಾಗಿದ್ದು, ವಿಮಾ ಕಂತಿನ ಮೊತ್ತ 6350 ರೂ.ಗಳಿರುತ್ತದೆ ಮತ್ತು ಮಾವು ಬೆಳೆಗಾರರಿಗೆ ಪ್ರತಿ ಹೆಕ್ಟರ್‌ಗೆ ವಿಮಾ ಮೊತ್ತ 80000 ರೂ.ಗಳಾಗಿದ್ದು, ವಿಮಾ ಕಂತಿನ ಮೊತ್ತ 4000 ರೂ.ಗಳಿರುತ್ತದೆ.

ಬೆಳೆ ಸಾಲ ಪಡೆದಿರುವ ಮತ್ತು ಪಡೆಯದ ರೈತರು ವಿಮೆ ಕಂತು ಕಟ್ಟಲು ಹತ್ತಿರದ ರಾಷ್ಟ್ರೀಕೃತ ಬ್ಯಾಂಕುಗಳಿಗೆ ಅಥವ ಹತ್ತಿರದ ಕಂಪ್ಯೂಟರ್ ಸೇವಾ ಕೇಂದ್ರಗಳಲ್ಲಿ ನಿಗಧಿತ ಅರ್ಜಿಗಳೊಂದಿಗೆ ಭೂ ದಾಖಲೆಗಳಾದ ಪಹಣಿ, ಬ್ಯಾಂಕ ಪಾಸ ಪುಸ್ತಕ, ಆಧಾರ್ ಕಾರ್ಡ್ ಮತ್ತು ಸ್ವಯಂ ಘೋಷಿತ ಬೆಳೆ ವಿವರಗಳೊಂದಿಗೆ ಸಂಪರ್ಕಿಸುವುದು.

ಹೆಚ್ಚಿನ ಮಾಹಿತಿಗಾಗಿ ಆಯಾ ತಾಲ್ಲೂಕು ತೋಟಗಾರಿಕೆ ಇಲಾಖೆ ಅಥವಾ ಸಮೀಪದ ರೈತ ಸಂಪರ್ಕ ಕೇಂದ್ರ ಹಾಗೂ ಸಮೀಪದ ಯಾವುದೇ ಬ್ಯಾಂಕ್‌ಗಳು, ಸಿಎಸ್‌ಸಿ ಕೇಂದ್ರಗಳಿಗೆ ಅಥವಾ ಗ್ರಾಮ್ ಒನ್ ಕೇಂದ್ರಗಳಿಗೆ ಭೇಟಿ ನೀಡಿ ಯೋಜನೆಯಡಿ ಆಯ್ಕೆಯಾಗಿರುವ ಗ್ರಾಮ ಪಂಚಾಯತ ಮತ್ತು ಬೆಳೆಗಳ ಬಗ್ಗೆ ಮಾಹಿತಿ ಪಡೆದುಕೊಂಡು ವಿಮೆಗಾಗಿ ಅರ್ಜಿ ಸಲ್ಲಿಸುವಂತೆ ತೋಟಗಾ-ರಿಕೆ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಿಲ್ಲಾಡಳಿತದಿಂದ ಜೂನ್ 27ರಂದು ನಾಡಪ್ರಭು ಕೆಂಪೇಗೌಡ ಜಯಂತಿ ಆಚರಣೆ

ನೈಜ್ಯ ದೆಸೆ ನ್ಯೂಸ್

**ರಾಯಚೂರು ಜೂನ್ 25 (ಕರ್ನಾಟಕ ವಾರ್ತೆ): ರಾಯಚೂರು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ನಾಡಪ್ರಭು ಕೆಂಪೇಗೌಡ ಜಯಂತಿ ಕಾರ್ಯಕ್ರಮವು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಜೂನ್ 27ರ ಬೆಳಿಗ್ಗೆ 11ಕ್ಕೆ ಹಮ್ಮಿಕೊಳ್ಳಲಾಗಿದೆ.**

ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷರು ಆಗಿರುವ ಬೀಳಗಿ ಕ್ಷೇತ್ರದ ಶಾಸಕರಾದ ಜೆ.ಟಿ.ಪಾಟೀಲ್ ಅವರು ಘನ ಉಪಸ್ಥಿತಿ ವಹಿಸುವರು.



ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್ ಅವರು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ಷಿ, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ಲಿಂಗಸಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ಡಿ.ವಜ್ಜಲ್, ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ.ನಾಯಕ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಷಿ, ಡಾ.ಚಂದ್ರಶೇಖರ್ ಬಿ.ಪಾಟೀಲ್, ಶರಣಗೌಡ ಪಾಟೀಲ ಬಯ್ಯಾಪುರ, ಎನ್.ಎಸ್.ಬೋಸರಾಜು, ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ,

ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಆರ್ಥಿಕ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಿತೇಶಕುಮಾರ ಸಿಂಗ್, ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ್, ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಷು ಗಿರಿ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದಾರೆ. ರಾಯಚೂರು ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಸಹ ಕಾರ್ಯದರ್ಶಿ ಡಾ.ದಂಡಪ್ಪ ಬಿರಾದಾರ್ ಅವರು ನಾಡಪ್ರಭು ಕೆಂಪೇಗೌಡ ಜಯಂತಿ ಕುರಿತು ಉಪನ್ಯಾಸ ನೀಡಲಿದ್ದಾರೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಉತ್ತರಾದೇವಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

## ಶಿಕ್ಷಣದ ಮಹತ್ವ ಅರಿವು 'ಸ್ವಚ್ಛ ಸುಂದರ ಹಸ್ತಾಕ್ಷರ ಅಭಿಯಾನ' ಕುರಿತು ಜಾಗೃತಿ

ನೈಜ್ಯ ದೆಸೆ ನ್ಯೂಸ್

**ತಾಳಿಕೋಟೆ: ತಾಳಿಕೋಟೆ ತಾಲೂಕಿನ ಕಲಕೇರಿ ಗ್ರಾಮದ ಬಸವೇಶ್ವರ ಪ್ರೌಢ ಶಾಲೆ, ಕಲಕೇರಿಯಲ್ಲಿ ವಿದ್ಯಾರ್ಥಿಗಳಿಗಾಗಿ ಶಿಕ್ಷಣ ಜಾಗೃತಿ ಹಾಗೂ 'ಸ್ವಚ್ಛ ಸುಂದರ ಹಸ್ತಾಕ್ಷರ ಅಭಿಯಾನ' ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು. ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿದ ಕಲಬುರ್ಗಿಯ ಜ್ಞಾನ ಶಾರದೆ ಅಕಾಡೆಮಿಯ ಅಧ್ಯಕ್ಷರಾದ ಡಾ. ಪ್ರವೀಣ ಬಿರಾದಾರ ಅವರು ವಿದ್ಯಾರ್ಥಿಗಳಿಗೆ ಶಿಕ್ಷಣದ ಮಹತ್ವ, ಓದುವ ಅಭ್ಯಾಸ ಮತ್ತು ಉತ್ತಮ ಹಸ್ತಾಕ್ಷರದ ಅಗತ್ಯತೆಯ ಕುರಿತು ಸಮಗ್ರವಾಗಿ ತಿಳಿಹೇಳಿದರು.**

ಈ ಸಂದರ್ಭದಲ್ಲಿ ಮಾತನಾಡಿದ ಅವರು, ವಿದ್ಯಾರ್ಥಿಗಳು ಕೇವಲ ಪಾಠಪುಸ್ತಕಗಳಿಗೆ ಸೀಮಿತವಾಗದೇ ಪ್ರತಿದಿನ ಓದುವ ಅಭ್ಯಾಸವನ್ನು ಬೆಳೆಸಿಕೊಳ್ಳಬೇಕು. ಓದು ವ್ಯಕ್ತಿತ್ವ ವಿಕಾಸಕ್ಕೆ ಮೂಲವಾಗಿದ್ದು, ಉತ್ತಮ ಭವಿಷ್ಯ ನಿರ್ಮಾಣಕ್ಕೆ ದಾರಿ ಮಾಡಿಕೊಡುತ್ತದೆ ಎಂದು ಹೇಳಿದರು. ಸಮಯವನ್ನು



ಸಮರ್ಪಕವಾಗಿ ಬಳಸಿಕೊಂಡು, ನಿಯಮಿತ ಅಧ್ಯಯನದ ಮೂಲಕ ಗುರಿ ಸಾಧಿಸಬಹುದು ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ಇಂದಿನ ತಾಂತ್ರಿಕ ಯುಗದಲ್ಲಿ ಮೊಬೈಲ್ ಮತ್ತು ಆನ್‌ಲೈನ್ ಆಟಗಳ ಪರಿಣಾಮವಾಗಿ ವಿದ್ಯಾರ್ಥಿಗಳು ಬರವಣಿಗೆಯಿಂದ ದೂರವಾಗುತ್ತಿರುವುದನ್ನು ಅವರು ಆತಂಕ



ವ್ಯಕ್ತಪಡಿಸಿದರು. ಕೊರೊನಾ ನಂತರ ಈ ಪ್ರವೃತ್ತಿ ಹೆಚ್ಚಿದ್ದು, ವಿದ್ಯಾರ್ಥಿಗಳಲ್ಲಿ ಸುಂದರ ಹಸ್ತಾಕ್ಷರದ ಕೊರತೆ ಕಂಡುಬರುತ್ತಿದೆ. ಸ್ಪರ್ಧಾತ್ಮಕ ಯುಗದಲ್ಲಿ ಉತ್ತಮ ಅಂಕಗಳನ್ನು ಗಳಿಸಲು ಹಸ್ತಾಕ್ಷರವು ಸಹ ಮಹತ್ವದ ಪಾತ್ರ ವಹಿಸುತ್ತದೆ ಎಂದು ಹೇಳಿದರು.

ಭಾರತ ಸರ್ಕಾರದ ರಾಷ್ಟ್ರೀಯ ಶಿಕ್ಷಣ ನೀತಿ (NEP 2020) ಅಡಿಯಲ್ಲಿ ಆರಂಭಿಸಿರುವ 'ಸ್ವಚ್ಛ ಸುಂದರ ಹಸ್ತಾಕ್ಷರ ಅಭಿಯಾನ'ದ ಉದ್ದೇಶವನ್ನು ವಿವರಿಸಿದ ಅವರು, ವಿದ್ಯಾರ್ಥಿಗಳು ತಮ್ಮ ಜ್ಞಾನವನ್ನು ಸ್ಪಷ್ಟವಾಗಿ ಮತ್ತು ಆಕರ್ಷಕವಾಗಿ ಪ್ರದರ್ಶಿಸುವ ಕೌಶಲ್ಯವನ್ನು ಬೆಳೆಸಿಕೊಳ್ಳಬೇಕು ಎಂದರು.

ತರಗತಿಯಲ್ಲಿ ವಿದ್ಯಾರ್ಥಿಗಳ ನಡವಳಿಕೆ ಕುರಿತು ಸಲಹೆ ನೀಡಿದ ಅವರು, ಶಿಕ್ಷಕರೊಂದಿಗೆ ದೃಷ್ಟಿ ಸಂಪರ್ಕ (Eye Contact) ಕಾಪಾಡಿಕೊಳ್ಳುವುದು ಹಾಗೂ IOC (Interest, Observation, Concentration) ತತ್ವಗಳನ್ನು ಅನುಸ-ರಿಸುವುದು ಅತ್ಯಗತ್ಯ ಎಂದು ಹೇಳಿದರು. ಆಸಕ್ತಿ, ವೀಕ್ಷಣೆ ಮತ್ತು ಏಕಾಗ್ರತೆ ಈ ಮೂರು ಅಂಶಗಳು ಶಿಕ್ಷಣದಲ್ಲಿ ಯಶಸ್ಸಿನ ಕೀಲಿಕೈ ಎಂದು ವಿವರಿಸಿದರು. ಇಂಗ್ಲಿಷ್ ಸಂವಹನ ಕೌಶಲ್ಯದಲ್ಲಿಯೂ ಕಾಲಗಳ (Tenses) ಮಹತ್ವವನ್ನು ತಿಳಿಹೇಳಿದ ಅವರು, ಭಾಷಾ ಪಾಠವನ್ನು ಸುಲಭವಾಗಿ ಅರ್ಥಮಾಡಿಕೊಳ್ಳಲು ವರ್ತಮಾನ, ಭೂತ ಮತ್ತು ಭವಿಷ್ಯಕಾಲಗಳ ಸರಿಯಾದ ಅರಿವು ಅಗತ್ಯವೆಂದರು. ಇದಲ್ಲದೆ, ವೇದ ಗಣಿತದ ಕೆಲವು ಸರಳ ತಂತ್ರಗಳನ್ನು ಪರಿಚಯಿಸಿ ವಿದ್ಯಾರ್ಥಿಗಳಲ್ಲಿ ಗಣಿತದ ಆಸಕ್ತಿಯನ್ನು ಹೆಚ್ಚಿಸಿದರು.

ಈ ಕಾರ್ಯಕ್ರಮದಲ್ಲಿ ಮುಖ್ಯಪಾಧ್ಯಾಯರು -ಜ. ಬಿ ಗುಮಶೆಟ್ಟಿ, ಎಸ್. ಆರ್. ಹ-ರಿಜನ, ಪಿ. ಟಿ. ಜಾಣಮಟ್ಟಿ, ಕೆ. ಎಸ್. ದೇಸಾಯಿ, ಪಿ. ಎಮ್. ಸಿಂದಗಿ, ಎಸ್. ಎಸ್. ಕಾರವಾರ, ಎಸ್. ಎಸ್. ಬಿರಾದಾರ, ಸುಧಾ. ಬಜೇಂತ್ರಿ, ದುಂಡಸಿ,ಶಾಲೆಯ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಸಕ್ರಿಯವಾಗಿ ಭಾಗವಹಿಸಿದ್ದರು.

ನೈಜ್ಯ ದೆಸೆ ಕನ್ನಡ ದಿನ ಪತ್ರಿಕೆ ಶುಕ್ರವಾರ 26 ಜೂನ್ 2026


## ನೇಮಕಾತಿ ಪ್ರಕಟಣೆ

**DHFWS ಧಾರವಾಡ ನೇಮಕಾತಿ 2026 – 15 ವೈದ್ಯಕೀಯ ಅಧಿಕಾರಿ, ಲ್ಯಾಬ್ ತಂತ್ರಜ್ಞ ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ಜೂನ್ 25, 2026**

DHFWS ಧಾರವಾಡ ನೇಮಕಾತಿ 2026: 15 ವೈದ್ಯಕೀಯ ಅಧಿಕಾರಿ, ಲ್ಯಾಬ್ ತಂತ್ರಜ್ಞ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ ಧಾರವಾಡ ಜೂನ್ 2026 ರ ಅಧಿಕೃತ ಅಧಿಸೂಚನೆಯ ಮೂಲಕ ವೈದ್ಯಕೀಯ ಅಧಿಕಾರಿ, ಲ್ಯಾಬ್ ತಂತ್ರಜ್ಞ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಧಾರವಾಡ ಕರ್ನಾಟಕ ಸರ್ಕಾರದಲ್ಲಿ ವೃತ್ತಿಯನ್ನು ಹುಡುಕುತ್ತಿರುವ ಉದ್ಯೋಗಾಕಾಂಕ್ಷಿಗಳು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 30–ಜೂನ್–2026 ರಂದು ಅಥವಾ ಮೊದಲು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು.
ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: 22–06–2026
ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 30–ಜೂನ್–2026
ಅಧಿಕೃತ ವೆಬ್‌ಸೈಟ್: dharwad.nic.in


## ವಿದ್ಯುತ್ ತಂತಿ ಸ್ಪರ್ಶಿಸಿ ಕಟ್ಟಡ ಕಾರ್ಮಿಕ ಸಾವು

❏ ನೈಜ್ಯ ದೆಸೆ ನ್ಯೂಸ್

**ಕುಷ್ಟಗಿ: ವಿದ್ಯುತ್ ತಂತಿ ಸ್ಪರ್ಶದಿಂದ ಕಟ್ಟಡ ಕಾರ್ಮಿಕರೊಬ್ಬರು ದುರ್ಮರಣಕ್ಕೀಡಾದ ಘಟನೆ ಬಸವನಗರದಲ್ಲಿ ಬುಧವಾರ ನಡೆದಿದೆ. ನವಲಹಳ್ಳಿ ಗ್ರಾಮದ ಹನುಮಂತ ಹನುಮಪ್ಪ ಪೂಜಾರಿ (50) ಮೃತ ದುರ್ದೈವಿ. ಮಾಜಿ ಸಚಿವ ಬಯ್ಯಾಪೂರ ಅವರ ಮನೆಯ ಕಾಂಪೌಂಡ್‌ಗೆ ಹೊಂದಿಕೊಂಡಿರುವ ಟಿಸಿಯ ಕೆಳಭಾಗದಲ್ಲಿ ಚರಂಡಿ ಕಾಮಗಾರಿ ನಡೆಯುತ್ತಿದ್ದ ವೇಳೆ ಈ ದುರ್ಘಟನೆ ಸಂಭವಿಸಿದೆ.**



ಚರಂಡಿ ಕಾಮಗಾರಿಯಲ್ಲಿ ನಿರತರಾಗಿದ್ದ ಹನುಮಂತ ಪೂಜಾರಿ ಅವರಿಗೆ ಟಿಸಿಯ ಫ್ಯೂಸ್‌ನ ತೆರೆದ ವಿದ್ಯುತ್ ತಂತಿ ತಲೆಗೆ ಸ್ಪರ್ಶಿಸಿದ್ದು, ಪರಿಣಾಮ ಸ್ಥಳದಲ್ಲೇ ಮೃತಪಟ್ಟಿದ್ದಾರೆ ಎಂದು ತಿಳಿದುಬಂದಿದೆ. ಘಟನೆಯ ಬಳಿಕ ಮೃತದೇಹವನ್ನು ಶವಗಾರಕ್ಕೆ ಸಾಗಿಸಲಾಗಿದ್ದು, ಪೊಲೀಸರು ಹಾಗೂ ಜೆಸ್ಕಾಂ ಸಿಬ್ಬಂದಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಮೃತರು ಪತ್ನಿ, ಇಬ್ಬರು ಪುತ್ರಿಯರು ಹಾಗೂ ಒಬ್ಬ ಪುತ್ರನನ್ನು ಅಗಲಿದ್ದಾರೆ. ಘಟನೆಯ ಹಿನ್ನೆಲೆಯಲ್ಲಿ ಸಾರ್ವಜನಿಕರು ಜೆಸ್ಕಾಂ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದು, ಹಲವು ಟ್ರಾನ್ಸ್‌ಫಾರ್ಮರ್‌ಗಳಿಗೆ ರಕ್ಷಣಾ ಬೇಲಿ ವ್ಯವಸ್ಥೆ ಸಮರ್ಪಕವಾಗಿಲ್ಲ. ಕೆಲವೆಡೆ ಬೇಲಿಗಳ ಸುತ್ತ ಗಿಡಗಂಟಿಗಳು ಬೆಳೆದು ಅಪಾಯಕಾರಿಯಾಗಿ ಪರಿಣಮಿಸಿರುವುದರಿಂದ ಸಂಬಂಧಪಟ್ಟ ಅಧಿಕಾರಿಗಳು ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

## ಕ್ರಿಷಿ ತಾಪಂಡ ಮನೆಯಲ್ಲಿ ಗೆಳೆಯ ವೈಶಾಕ್ ಆತ್ಮಹತ್ಯೆ

❏ ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ನಟಿ ಕ್ರಿಷಿ ತಾಪಂಡ ಮನೆಯಲ್ಲಿ ವೈಶಾಕ್ ಎಂಬ ವ್ಯಕ್ತಿ ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ನಗರದ ಆರ್ ಆರ್ ನಗರದ ಮನೆಯಲ್ಲಿ ಘಟನೆ ನಡೆದಿದೆ.**



ಕ್ರಿಷಿ ಹಾಗೂ ವೈಶಾಕ್ ಇಬ್ಬರು ಒಂದೇ ಮನೆಯಲ್ಲಿ ವಾಸಿಸುತ್ತಿದ್ದರು. ನಿನ್ನೆ ರಾತ್ರಿ ಕ್ರಿಷಿ ಮನೆಯಲ್ಲಿ ಇಲ್ಲದಾಗ ವೈಶಾಕ್ ರಾತ್ರಿ 8.30 ರ ವೇಳೆಗೆ ಕ್ರಿಷಿಗೆ ಕರೆ ಮಾಡಿ ಆತ್ಮಹತ್ಯೆ ಮಾಡಿಕೊಳ್ಳುತ್ತಿರುವುದಾಗಿ ಹೇಳಿದ್ದಾರೆ. ಆ ಸಂದರ್ಭದಲ್ಲಿ ಕ್ರಿಷಿ ಆತನ ಕುಟುಂಬಕ್ಕೆ ಹಾಗೂ ಪೊಲೀಸರಿಗೆ ಮಾಹಿತಿ ನೀಡಿದ್ದರು ಎನ್ನಲಾಗಿದೆ. ವೈಶಾಕ್ ಹಲವು ದಿನಗಳಿಂದ ಮಾನಸಿಕ ಖಿನ್ನತೆಯಲ್ಲಿ ಇದ್ದರು ಎನ್ನಲಾಗಿದೆ. ಮನೆಯಲ್ಲಿ ಯಾವುದೇ ಡೆತ್‌ನೋಟ್ ಪತ್ತೆಯಾಗಿಲ್ಲ. ಸದ್ಯ ಮೃತದೇಹವು ವಿಕ್ಟೋರಿಯಾ ಆಸ್ಪತ್ರೆಯಲ್ಲಿದ್ದು, ಕುಟುಂಬಸ್ಥರು ಬಂದ ನಂತರ ಮರಣೋತ್ತರ ಪರೀಕ್ಷೆ ನಡೆಯಲಿದೆ. ವೈಶಾಕ್ ಮೂಲತಃ ಜಯನಗರದವರು. ಅವರಿಗೆ ಮದುವೆಯಾಗಿತ್ತು. ನಂತರ ಕ್ರಿಷಿ ಪರಿಚಯವಾಗಿತ್ತು. ಉದ್ಯಮಿಯೊಬ್ಬರಿಗೆ ಬೆದರಿಕೆ ಹಾಕಿದ್ದ ಎಂಬ ಆರೋಪ ಹಿನ್ನೆಲೆ ಫೆಬ್ರವರಿ ಮೊದಲ ವಾರದಲ್ಲಿ ಇತನ ಬಂಧನವೂ ಆಗಿತ್ತು ಎನ್ನಲಾಗಿತ್ತು.

## ಕಾರುಣ್ಯಾಶ್ರಮಕ್ಕೆ ಒಳಬಳ್ಳಾರಿ ಹಾಗೂ ಯದ್ದಲದೊಡ್ಡಿ ಶ್ರೀ ಮಠಗಳ ಶ್ರೀ ರಕ್ಷೆ ಸದಾವಕಾಲವಿರುತ್ತದೆ – ಮಹಾಲಿಂಗ ಮಹಾಸ್ವಾಮಿಗಳು

❏ ನೈಜ್ಯ ದೆಸೆ ನ್ಯೂಸ್



**ಸಿಂಧನೂರು: ನಗರದ ಒಳಬಳ್ಳಾರಿ ರಸ್ತೆಯಲ್ಲಿರುವ ಕರ್ನಾಟಕ ಸರ್ಕಾರದ ರಾಜ್ಯ ಪ್ರಶಸ್ತಿ ಪುರಸ್ಕೃತ ಸಂಸ್ಥೆಯಾದ ಶ್ರೀಮಠ ಸೇವಾ ಟ್ರಸ್ಟ್ (ರಿ) ಹರೇಟನೂರು ಕಾರುಣ್ಯ ನೆಲೆ ವೃದ್ಧಾಶ್ರಮ ಹಾಗೂ ವಯಸ್ಕರ ಬುದ್ಧಿಮಾಂದ್ಯ ಆಶ್ರಮದಲ್ಲಿ ಸ್ವಾಮಿ ಚಾರಿಟೇಬಲ್ ಟ್ರಸ್ಟ್ (ರಿ)ಕರಡಕಲ್ ಲಿಂಗಸೂಗೂರು ಹಾಗೂ ಚನ್ನಬಸವ ಸ್ವಾಮಿ ಹಿರೇಮಠ ಶಿಷ್ಯ ಬಳಗ ಹರೇಟನೂರು ಇವರುಗಳ ವತಿಯಿಂದ ಆಶ್ರಮದ ಸೇವಾಕರ್ತ ದಂಪತಿಗಳಾದ ಸುಜಾತ ಡಾ.**

ಚನ್ನಬಸವ ಸ್ವಾಮಿ ಹಿರೇಮಠ ಈ ದಂಪತಿಗಳ 27ನೇ ವರ್ಷದ ವಿವಾಹ ವಾರ್ಷಿಕೋತ್ಸವ ಸಮಾರಂಭ ಕಾರ್ಯಕ್ರಮ ಅರ್ಥಪೂರ್ಣವಾಗಿ ನೆರವೇರಿತು. ಈ ಕಾರ್ಯಕ್ರಮದಲ್ಲಿ ಯದ್ದಲದೊಡ್ಡಿ ಸುವರ್ಣಗಿರಿ ವಿರಕ್ತಮಠದ ಶ್ರೀ ಮ. ನಿ. ಪ್ರ. ಮಹಾಲಿಂಗ ಮಹಾಸ್ವಾಮಿಗಳು ಹಾಗೂ ಅಡವಿ ಅಮರೇಶ್ವರ ಸುಕ್ಷೇತ್ರದ ಶ್ರೀ ಮ.ನಿ.ಪ್ರ. ತೊಂಟದಾರ್ಯ ಮಹಾಸ್ವಾಮಿಗಳಿಗೆ ಆಶ್ರಮದಲ್ಲಿ ವಿಶೇಷ ಪಾದ ಪೂಜೆಯನ್ನು ಸಲ್ಲಿಸಿ ಆಶೀರ್ವಾದ ಸ್ವೀಕರಿಸಲಾಯಿತು. ಈ ಕಾರ್ಯಕ್ರಮದಲ್ಲಿ ಸಿಂಧನೂರಿನ ಸಮಾಜ ಸೇವಕರು ಖ್ಯಾತ ನೇತ್ರ ತಜ್ಞರಾದ ಡಾ.ಚನ್ನನಗೌಡ.ಆರ್.ಪಾಟೀಲ್ ನವರು ಆಶ್ರಮಕ್ಕೆ ಅವಶ್ಯಕತೆ ಇದ್ದ ಉತ್ತಮ ಗುಣಮಟ್ಟದ ಫ್ಯಾನ್ ಗಳನ್ನು ವಿತರಿಸಿ ಮಾನವೀಯತೆ ಮೆರೆದರು.

ಕಾರ್ಯಕ್ರಮದಲ್ಲಿ ದಿವ್ಯ ಸಾನಿಧ್ಯ ವಹಿಸಿದ್ದ ಯದ್ದಲದೊಡ್ಡಿ ಸುವರ್ಣ ಗಿರಿ ವಿರಕ್ತ ಮಠದ ಮಹಾಲಿಂಗ ಒಳಬಳ್ಳಾರಿಯ ಚೆನ್ನಬಸವ ಮಹಾಶಿವಯೋಗಿಗಳ ಆಶಯದಂತೆ ಕಾರುಣ್ಯಾಶ್ರಮದ ಸೇವೆ ಸಮಾಜಕ್ಕೆ ಅರ್ಪಣೆಯಾಗುತ್ತಿದೆ. ಈ ಕಾರುಣ್ಯ ಆಶ್ರಮದ ನಿರಂತರ ಸಾಮಾಜಿಕ ಚಟುವಟಿಕೆಗಳು ನಮ್ಮ ಕಲ್ಯಾಣ ಕರ್ನಾಟಕದ ಹಲವಾರು ಸಮಾಜ ಸೇವಕರುಗಳಿಗೆ ಸ್ಪೂರ್ತಿಯಾಗಿವೆ. ನಮ್ಮ ನಾಡಿನ ಬಸವಾದಿ ಶರಣರ ಹರ ಗುರು ಚರಮೂರ್ತಿಗಳ ನಿರಂತರ ಪ್ರಾರ್ಥನೆಯಿಂದ ಕಾರುಣ್ಯ ಕುಟುಂಬದ ಸೇವೆಗಳು ಜರುಗುತ್ತಿರುವುದು ಎಲ್ಲಾ ಪೂಜ್ಯರ ಪ್ರೀತಿಗೆ ಕಾರುಣ್ಯ ಆಶ್ರಮ ಪಾತ್ರವಾಗಿದೆ. ಕಾರುಣ್ಯಾಶ್ರಮಕ್ಕೆ ಒಳಬಳ್ಳಾರಿ ಹಾಗೂ ಯದ್ದಲದೊಡ್ಡಿ ಶ್ರೀ ಮಠಗಳ ಶ್ರೀರಕ್ಷೆ ಸದಾವಕಾಲವಿರುತ್ತದೆ.

ಮುಂದಿನ ದಿನಮಾನಗಳಲ್ಲಿ ಸರ್ಕಾರದ ಸ್ವಂತ ಜಾಗ ಹಾಗೂ ಅನುದಾನ ಸಿಗುವಲ್ಲಿ ಇಲ್ಲಿನ ಎಲ್ಲಾ ಜನಪ್ರತಿನಿಧಿಗಳು ಮನಸ್ಸು ಮಾಡಲಿ ಎನ್ನುವುದು ನಮ್ಮೆಲ್ಲರ ಆಶಯವಾಗಿದೆ ಎಂದು ಆಶೀರ್ವಚನ ನೀಡಿ ಆಶೀರ್ವದಿಸಿದರು. ನಂತರ ಹಿರೇಕೊಟ್ನಿಕಲ್ ಸೀಮಾ ಅಡವಿ ಅಮರೇಶ್ವರ ಸುಕ್ಷೇತ್ರದ ಶ್ರೀ ಮ. ನಿ.ಪ್ರ.ತೊಂಟದಾರ್ಯ ಮಹಾಸ್ವಾಮಿಗಳು ಒಳಬಳ್ಳಾರಿಯ ಲಿಂಗಕ್ಕೆ ಶ್ರೀ ಚನ್ನಬಸವ ಮಹಾಶಿವಯೋಗಿಗಳ ಆಶೀರ್ವಾದವೇ ಕಾರುಣ್ಯಾಶ್ರಮಕ್ಕೆ ಶ್ರೀರಕ್ಷೆ ನಮ್ಮ ಭಾಗದ ನಡೆದಾಡುವ ದೇವರಾಗಿ ಮಹತಪಸ್ವಿಗಳಾದ ಚನ್ನಬಸವ ಮಹಾ ಶಿವಯೋಗಿಗಳ ಹೆಸರಿನೊಂದಿಗೆ ಕಾರುಣ್ಯ ಆಶ್ರಮವನ್ನು ಪ್ರಾರಂಭ ಮಾಡಿದ ಹರೆಟನೂರಿನ ನಮ್ಮ ಚನ್ನಬಸವ ಸ್ವಾಮಿಯವರು ಸಮಾಜ ಸೇವೆಯಲ್ಲಿ ಒಳಬಳ್ಳಾರಿ ಶ್ರೀ ಮಠದ ಘನತೆ ಗೌರವವನ್ನು ಎತ್ತಿ ಹಿಡಿಯುತ್ತಿದ್ದಾರೆ.


ಎಲ್ಲಾ ಶ್ರೀ ಪೂಜ್ಯರುಗಳ ನಿರಂತರ ಆಶೀರ್ವಾದ ಕಾರುಣ್ಯ ಕುಟುಂಬಕ್ಕಿರುತ್ತದೆ. ಜಂಗಮನ ಕಾಯಕದಲ್ಲಿ ಕೈಲಾಸವಿದೆ ಎಂದು ಸಮಾಜಕ್ಕೆ ತೋರಿಸಿ ಕೊಟ್ಟಿದ್ದು ಕಾರುಣ್ಯಾಶ್ರಮ. ಸುಜಾತ ಚೆನ್ನಬಸವ ದಂಪತಿಗಳಿಬ್ಬರು ಅನಾಥರಿಗಾಗಿ ತಮ್ಮ ಬದುಕನ್ನು ಮೀಸಲಿಟ್ಟು ಮಾಡುತ್ತಿರುವ ಈ ಸೇವೆಯೂ ಭಗವಂತನ ಪೂಜೆಗಿಂತ ಮಿಗಿಲಾದುದು ಎಂದು ಮಾತನಾಡಿ ಹಲವಾರು ಸಂದೇಶಗಳ ಮೂಲಕ ಆಶೀರ್ವಚನ ನೀಡಿ ಆಶೀರ್ವದಿಸಿದರು. ಈ ಕಾರ್ಯಕ್ರಮದಲ್ಲಿ ವೇ. ಮೂ. ವೀರೇಶ ಯಡಿಯೂರು ಮಠ ಶ್ರೀ ಶಾಂಭವಿ ಪುಣ್ಯಾಶ್ರಮ ಸಿಂಧನೂರು.ಉಮಾದೇವಿ ಹಿರೇಮಠ ಸಂಸ್ಥಾಪಕರು ಸ್ವಾಮಿ ಚಾರಿಟೇಬಲ್ ಟ್ರಸ್ಟ್ (ರಿ)ಕರಡಕಲ್.ವೀರನಗೌಡ ಬಾದರ್ಲಿ. ಡಾ. ಚನ್ನನಗೌಡ. ಆರ್.ಪಾಟೀಲ್ ಖ್ಯಾತ ನೇತ್ರ ತಜ್ಞರು ಹಾಗೂ ಸಮಾಜಸೇವಕರು ಸಿಂಧನೂರು. ಡಾ. ಮಲ್ಲಿಕಾರ್ಜುನ ಸ್ವಾಮಿ ಹಿರೇಮಠ ಕರಡಕಲ್ ಸದಸ್ಯರು ಕಾರುಣ್ಯ ಆಶ್ರಮ ಸಿಂಧನೂರು.

ಶರಣಯ್ಯ ಸ್ವಾಮಿ ರಾವಿಹಾಳ.ರೇಣುಕಯ್ಯ ಸ್ವಾಮಿ ಬಿ. ಎಸ್. ಎನ್. ಎಲ್. ಸಿಂಧನೂರು. ಗೌರಮ್ಮ ರೇಣುಕಯ್ಯ ಸ್ವಾಮಿ ಸಿಂಧನೂರು.ಬಷೀರ್ ಎತ್ಮಾರಿ ಸಿಂಧನೂರು ಭೀಮಣ್ಣ ದೇವರಗುಡಿ. ಪಂಪನಗೌಡ ಭೀಮನಗೌಡ್ರು ಹರೇಟನೂರು. ವೀರಭದ್ರಗೌಡ ಗಿಣಿವಾರ. ಹನುಮಂತಪ್ಪ ಎ. ಎಸ್. ಐ. ಮಸ್ಕಿ. ಬೀರಣ್ಣ ಯಲಗಲದಿನ್ನಿ. ಮಹೇಶ ಕಸಬಾ ಲಿಂಗಸೂಗೂರು.ಈರಮ್ಮ ಅಮರಯ್ಯ ಸ್ವಾಮಿ ಹಿರೇಮಠ ಹರೇಟನೂರು. ಭವಾನಿ ರಾಯಚೂರು. ಸಾಹಿತ್ಯ ಮಸ್ಕಿ.ಹಾಗೂ ಆಶ್ರಮದ ಸಿಬ್ಬಂದಿಗಳಾದ ಸುಜಾತ ಮಲದಗುಡ್ಡ. ಸಿದ್ದಯ್ಯ ಸ್ವಾಮಿ. ಮರಿಯಪ್ಪ ಜ್ಯೋತಿ ಮತ್ತು ಅನೇಕರು ಭಾಗವಹಿಸಿದ್ದರು

## ಸರಕಾರಿ ಪ್ರಥಮ ದರ್ಜೆ ಕಾಲೇಜು ಅತಿಥಿ ಉಪನ್ಯಾಸಕರ ಗೋಳು ಕೇಳುವವರು ಯಾರು?

❏ ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ರಾಜ್ಯದ ಉನ್ನತ ಶಿಕ್ಷಣದ ಬೆನ್ನೆಲುಬಾಗಿ ನಿಂತಿರುವ ಸರಕಾರಿ ಪ್ರಥಮ ದರ್ಜೆ ಕಾಲೇಜುಗಳ (ಉಈಉಅ) ಸಾವಿರಾರು ಅತಿಥಿ ಉಪನ್ಯಾಸಕರ ಬದುಕು ಇಂದು 'ತ್ರಿಶಂಕು' ಸ್ಥಿತಿಯಲ್ಲಿದೆ. ಪ್ರತಿ ವರ್ಷ ಶೈಕ್ಷಣಿಕ ವರ್ಷ ಆರಂಭವಾಗುತ್ತಿದ್ದಂತೆ ಇವರ ಸೇವೆ ಮುಂದುವರಿಕೆ, ಗೌರವಧನ ಹೆಚ್ಚಳ ಹಾಗೂ ಉದ್ಯೋಗ ಭದ್ರತೆಗಾಗಿ ಬೀದಿಗಿಳಿದು ಹೋರಾಡುವುದು ಒಂದು ನಿರಂತರ ಜಿಕಿರಿಯಾಗಿ ಮಾರ್ಪಟ್ಟಿದೆ. "ನಮ್ಮ ಗೋಳನ್ನು ಕೇಳುವವರು ಯಾರು?" ಎನ್ನುವ ಅತಿಥಿ ಉಪನ್ಯಾಸಕರ ಆಕ್ರೋಶದ ನರಳು ಈಗ ಉನ್ನತ ಶಿಕ್ಷಣ ವಲಯದಲ್ಲಿ ತೀವ್ರವಾಗಿ ಕೇಳಿಬರುತ್ತಿದೆ.**



ಅನಿಯಮಿತ ಪಾವತಿ ರಾಜ್ಯದ ನೂರಾರು ಸರಕಾರಿ ಕಾಲೇಜುಗಳಲ್ಲಿ ಖಾಯಂ ಉಪನ್ಯಾಸಕರಿಗಿಂತ ಅತಿಥಿ ಉಪನ್ಯಾಸಕರೇ ಹೆಚ್ಚಿನ ಸಂಖ್ಯೆಯಲ್ಲಿದ್ದಾರೆ. ಬಹುತೇಕ ಕಾಲೇಜುಗಳು ಇವರ ಶ್ರಮದ ಮೇಲೆಯೇ ನಡೆಯುತ್ತಿವೆ. ಆದರೆ, ಇವರಿಗೆ ನೀಡಲಾಗುವ ಗೌರವಧನ ಮಾತ್ರ ಅತ್ಯಲ್ಪ. ಅದೂ ಕೂಡ ಪ್ರತಿ ತಿಂಗಳು ಸರಿಯಾದ ಸಮಯಕ್ಕೆ ಕೈ ಸೇರುವುದಿಲ್ಲ. ತಡವಾಗಿ ಹಣ ಬಿಡುಗಡೆಯಾಗುವುದರಿಂದ, ಇವರು ಜೀವನ ನಿರ್ವಹಣೆಗೆ, ಮನೆ ಬಾಡಿಗೆ ಕಟ್ಟಲು ಮತ್ತು ದೈನಂದಿನ ವೆಚ್ಚಗಳಿಗಾಗಿ ಸಾಲದ ಸುಳಿಗೆ ಸಿಲುಕುವಂತಾಗಿದೆ. ವರ್ಷಪೂರ್ತಿ ದುಡಿದರೂ ಇಲ್ಲ 'ಉದ್ಯೋಗ ಭದ್ರತೆ' ಅತಿಥಿ ಉಪನ್ಯಾಸಕರನ್ನು ಕೇವಲ ಹತ್ತು ತಿಂಗಳ ಅವಧಿಗೆ ಮಾತ್ರ ನೇಮಕ ಮಾಡಿಕೊಳ್ಳಲಾಗುತ್ತದೆ.

ಶೈಕ್ಷಣಿಕ ವರ್ಷ ಮುಗಿಯುತ್ತಿದ್ದಂತೆ ಇವರನ್ನು ಕೆಲಸದಿಂದ ಮುಕ್ತಗೊಳಿಸಲಾಗುತ್ತದೆ. ಮೇ ಮತ್ತು ಜೂನ್ ತಿಂಗಳ ರಜಾ ಅವಧಿಯಲ್ಲಿ ಇವರಿಗೆ ಯಾವುದೇ ವೇತನ ಇರುವುದಿಲ್ಲ. ಆ ಎರಡು ತಿಂಗಳು ಕುಟುಂಬ ನಡೆಸುವುದು ಹೇಗೆ ಎಂಬುದು ಇವರ ಮುಂದಿರುವ ಯಕ್ಷಪ್ರಶ್ನೆ. ಹತ್ತಾರು ವರ್ಷಗಳಿಂದ ಇದೇ ವೃತ್ತಿಯಲ್ಲಿ ನಂಬಿ ದುಡಿದ ನೂರಾರು ಉಪನ್ಯಾಸಕರಿಗೆ ಈಗ ಬೇರೆ ಕೆಲಸ ಹುಡುಕಿಕೊಳ್ಳಲು ವಯೋಮಿತಿ ಮೀರಿದೆ. ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಬರೆಯುವ ವಯಸ್ಸನ್ನೂ ಅವರು ದಾಟಿದ್ದಾರೆ. ತಾರತಮ್ಯದ ನೀತಿ ಖಾಯಂ ಉಪನ್ಯಾಸಕರಷ್ಟೇ ಅರ್ಹತೆ (NET/SLET/Ph.D) ಹೊಂದಿದ್ದರೂ, ಸಮಾನ ಕೆಲಸಕ್ಕೆ ಸಮಾನ ವೇತನ ಸಿಗುತ್ತಿಲ್ಲ ಎಂಬುದು ಇವರ ಪ್ರಮುಖ ಅಳಲು. ಕಾಲೇಜುಗಳಲ್ಲಿ ಪಠ್ಯಕ್ರಮ ಬೋಧನೆ, ಪರೀಕ್ಷಾ ಕರ್ತವ್ಯ, ಮೌಲ್ಯಮಾಪನ ಸೇರಿದಂತೆ ಎಲ್ಲಾ ಜವಾಬ್ದಾರಿಗಳನ್ನು ಇವರು ಸಮರ್ಥವಾಗಿ ನಿಭಾಯಿಸುತ್ತಾರೆ. ಆದರೂ ಇವರನ್ನು 'ಅತಿಥಿ'ಗಳೆಂದೇ ಪರಿಗಣಿಸಿ ನಿರ್ಲಕ್ಷಿಸಲಾಗುತ್ತಿದೆ.

ಹಲವು ವರ್ಷಗಳಿಂದ ಸೇವಾ ವಿಲೀನ ಅಥವಾ ಕನಿಷ್ಠ ಉದ್ಯೋಗ ಭದ್ರತೆ ಒದಗಿಸಬೇಕೆಂಬ ಬೇಡಿಕೆ ಕೇವಲ ಭರವಸೆಗಳಿಗಷ್ಟೇ ಸೀಮಿತವಾಗಿದೆ. ಸಮಿತಿಗಳ ರಚನೆ, ವರದಿ ಸಲ್ಲಿಕೆಗಳ ನಾಟಕದ ನಡುವೆ ಅತಿಥಿ ಉಪನ್ಯಾಸಕರ ಬದುಕು ಬೀದಿಗೆ ಬೀಳುವಂತಾಗಿದೆ. ಇನ್ನಾದರೂ ಉನ್ನತ ಶಿಕ್ಷಣ ಇಲಾಖೆ ಹಾಗೂ ರಾಜ್ಯ ಸರಕಾರ ಎಚ್ಚೆತ್ತುಕೊಂಡು, ಅತಿಥಿ ಉಪನ್ಯಾಸಕರ ಶೋಷಣೆಯನ್ನು ನಿಲ್ಲಿಸಿ, ಅವರಿಗೆ ಗೌರವಾನ್ವಿತ ಬದುಕು ಮತ್ತು ಉದ್ಯೋಗದ ಗ್ಯಾರಂಟಿ ನೀಡಬೇಕಿದೆ. ಇಲ್ಲದಿದ್ದರೆ ರಾಜ್ಯದ ಸರಕಾರಿ ಕಾಲೇಜುಗಳ ಶೈಕ್ಷಣಿಕ ಗುಣಮಟ್ಟ ಕುಸಿಯುವುದರಲ್ಲಿ ಯಾವುದೇ ಸಂಶಯವಿಲ್ಲ.

"ನಾವು ಕೇವಲ ಬೋಧಕರಲ್ಲ, ಸಾವಿರಾರು ಬಡ ವಿದ್ಯಾರ್ಥಿಗಳ ಭವಿಷ್ಯ ರೂಪಿಸುವ ಶಿಲ್ಪಿಗಳು. ಆದರೆ, ನಮ್ಮ ಸ್ವಂತ ಭವಿಷ್ಯವೇ ಇಂದು ಕತ್ತಲಲ್ಲಿದೆ. ಸರಕಾರ ನಮ್ಮನ್ನು ಕೇವಲ ಚುನಾವಣಾ ಭರವಸೆಯಾಗಿ ಬಳಸಿಕೊಳ್ಳದೆ, ಮಾನವೀಯ ನೆಲೆಗಟ್ಟಿನಲ್ಲಿ ಉದ್ಯೋಗ ಭದ್ರತೆ ನೀಡಬೇಕು."
ಡಾ.ಅರುಣಕುಮಾರ ಬೇರ್ಗಿ ಅತಿಥಿ ಉಪನ್ಯಾಸಕರು

## ಮಾನಸಿಕ ಆರೋಗ್ಯವೂ ಆರೋಗ್ಯವೇ ? ಕಾಳಜಿ ವಹಿಸಿ, ಬೆಂಬಲ ನೀಡಿಮೂಡಿ ನಂಬಿಕೆಗೆ ಒಳಗಾಗಬೇಡಿ.

❏ ನೈಜ್ಯ ದೆಸೆ ನ್ಯೂಸ್

**ಸಿಂಧನೂರು ಜೂನ್ 25: ಜಿಲ್ಲಾಡಳಿತ ಜಿಲ್ಲಾ ಪಂಚಾಯಿತಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಜಿಲ್ಲಾ ಮಾನಸಿಕ ಆರೋಗ್ಯ ವಿಭಾಗ ರಾಯಚೂರು ಮತ್ತು ಆರೋಗ್ಯ ಮತ್ತು ಕ್ಷೇಮ ಮಂದಿರ ಕೊಂಕನಟ್ಟಿ ಸರಕಾರಿ ಮೌಲಾನಾ ಆಜಾದ್ ಪಬ್ಲಿಕ್ ಶಾಲೆ ಪಿ ಡಬ್ಲ್ಯೂಡಿ ಇವರು ಸಂಯುಕ್ತ ಆಶ್ರಯದಲ್ಲಿ ಮಾನಸಿಕ ಆರೋಗ್ಯದ ಕುರಿತು ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು**




ಕಾರ್ಯಕ್ರಮದ ಕುರಿತು ಮಾತನಾಡಿದ ಜಿಲ್ಲಾ ಮಾನಸಿಕ ಆರೋಗ್ಯ ವಿಭಾಗದ ಆಪ್ತ ಸಮಾಲೋಚಕರಾದ ಅರುಣ ಕುಲಕರ್ಣಿ ಅವರು ಮಾತನಾಡಿ ಮಾನಸಿಕ ಆರೋಗ್ಯವು ದೈಹಿಕ ಆರೋಗ್ಯದಷ್ಟೇ ಮಹತ್ವದ್ದಾಗಿದೆ. ಇತ್ತೀಚಿನ ದಿನಗಳಲ್ಲಿ ಒತ್ತಡ, ಆತಂಕ ಮತ್ತು ಖಿನ್ನತೆಯಂತಹ ಸಮಸ್ಯೆಗಳು ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಜನರು ತಮ್ಮ ಮಾನಸಿಕ ಆರೋಗ್ಯದ ಬಗ್ಗೆ ಹೆಚ್ಚು ಕಾಳಜಿ ವಹಿಸಬೇಕು ಎಂದು ಅವರು ಸಲಹೆ ನೀಡಿದರು. ನಂತರ ಮಾತನಾಡಿದ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಾಲಪ್ಪ ನಾಯಕ ಅವರು ಧ್ಯಾನ, ಯೋಗ, ನಿಯಮಿತ ವ್ಯಾಯಾಮ ಹಾಗೂ ಕುಟುಂಬದ ಬೆಂಬಲವು ಉತ್ತಮ ಮಾನಸಿಕ ಆರೋಗ್ಯ ಕಾಪಾಡಿಕೊಳ್ಳಲು ಸಹಕಾರಿಯಾಗುತ್ತದೆ. ಸಮಾಜದಲ್ಲಿರುವ ತಪ್ಪು ಕಲ್ಪನೆಗಳನ್ನು ದೂರ ಮಾಡಿ, ಅಗತ್ಯವಿದ್ದಾಗ ವೃತ್ತಿಪರ ನೆರವು ಪಡೆಯುವಂತೆ ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸುತ್ತಾ ಮಾನಸಿಕ ಆರೋಗ್ಯ ಎಂದರೆ ವ್ಯಕ್ತಿಯ ಭಾವನೆಗಳು, ಆಲೋಚನೆಗಳು ಮತ್ತು ವರ್ತನೆಯನ್ನು ಸಮತೋಲನದಲ್ಲಿ ಇಟ್ಟುಕೊಂಡು ದೈನಂದಿನ ಜೀವನವನ್ನು ಪರಿಣಾಮಕಾರಿಯಾಗಿ ನಡೆಸುವ ಸಾಮರ್ಥ್ಯ. ಇದು ವ್ಯಕ್ತಿಯು ತನ್ನ ಸಾಮರ್ಥ್ಯವನ್ನು ಅರಿತುಕೊಳ್ಳಲು, ಜೀವನದ ಸವಾಲುಗಳನ್ನು ಎದುರಿಸಲು, ಉತ್ತಮ ಸಂಬಂಧಗಳನ್ನು ಬೆಳೆಸಿಕೊಳ್ಳಲು ಹಾಗೂ ಸಮಾಜಕ್ಕೆ ಸಕಾರಾತ್ಮಕವಾಗಿ ಕೊಡುಗೆ ನೀಡಲು ಸಹಾಯ ಮಾಡುತ್ತದೆ ಎಂದರು. ಈ ಸಂದರ್ಭದಲ್ಲಿ ಮೌಲಾನಾ ಆಜಾದ್ ಪಬ್ಲಿಕ್ ಶಾಲೆ ಪಿ ಡಬ್ಲ್ಯೂಡಿ ಶಾಲೆಯ ಮುಖ್ಯೋಪಾಧ್ಯಾಯರಾದ ಬಸವರಾಜ. ಶಿಕ್ಷಕ ವೃಂದದವರು. ವಿದ್ಯಾರ್ಥಿ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು


# ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮ

## ಮಕ್ಕಳಿಗೆ ಲಸಿಕೆ ಹಾಕಲು ಸಕಲ ಸಿದ್ದತೆ ಮಾಡಿಕೊಳ್ಳಲಾಗಿದೆ : ಡಾ.ಸುರೇಂದ್ರ ಬಾಬು

❏ ನೈಜ್ಯ ದೆಸೆ ನ್ಯೂಸ್

**ರಾಯಚೂರು:ಜೂ,25, ಭವಿಷ್ಯದಲ್ಲಿ ಮಕ್ಕಳಲ್ಲಿ ಶಾಶ್ವತ ಅಂಗವಿಕಲತೆ ಉಂಟು ಮಾಡುವ 'ಪೋಲಿಯೋ ಮೈಲಿಟಿಸ್' ವೈರಸ್ ನಿಯಂತ್ರಣಕ್ಕಾಗಿ 1995 ರಿಂದ ಭಾರತ ಸರಕಾರವು ಅಭಿಯಾನದ ರೂಪದಲ್ಲಿ ಹಮ್ಮಿಕೊಳ್ಳುತ್ತಾ ಬರಲಾಗಿರುವ "ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮ'ವು ಈ ವರ್ಷ ಜೂನ್ 28 ರ ಭಾನುವಾರದಂದು ಜಿಲ್ಲಾದ್ಯಂತ ಜರುಗಲಿದ್ದು ಪಾಲಕರು ಹತ್ತಿರದ ಬೂತ್‌ಗಳಲ್ಲಿ ಲಸಿಕೆ ಹಾಕಿಸಲು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಸುರೇಂದ್ರಬಾಬು ಪತ್ರಿಕಾ ಪ್ರಕಟಣೆಯ ಮೂಲಕ ಮನವಿ ಮಾಡಿದ್ದಾರೆ.**

ರಾಯಚೂರು ಜಿಲ್ಲೆಯ ಲಸಿಕಾ ಕಾರ್ಯಕ್ರಮದ ಒಂದು ನೋಟ: ರಾಯಚೂರು ಜಿಲ್ಲೆಯ ಎಲ್ಲ ತಾಲ್ಲೂಕುಗಳಲ್ಲಿ ನಗರ ಗ್ರಾಮೀಣ ಭಾಗದಲ್ಲಿ ಜಿಲ್ಲಾಧಿಕಾರಿಗಳು ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯತ ರವರ ಮಾರ್ಗದರ್ಶನದಲ್ಲಿ ಸಕಲ ಸಿದ್ದತೆ ಮಾಡಿಕೊಳ್ಳಲಾಗಿದೆ. ಈ ಹಿನ್ನಲೆಯಲ್ಲಿ ಹುಟ್ಟಿನಿಂದ 5 ವರ್ಷದೊಳಗಿನ ಒಟ್ಟು 2,60,002 ಮಕ್ಕಳಿಗೆ ಲಸಿಕೆ ಹಾಕುವ ಗುರಿಯೊಂದಿಗೆ 3,29,000 ಡೋಸ್ ಲಸಿಕೆ ಸಿದ್ದವಾಗಿಟ್ಟು ಕೊಳ್ಳಲಾಗಿದೆ. ಜಿಲ್ಲೆಯಲ್ಲಿ ಒಟ್ಟು 450732 ಮನೆಗಳ ಭೇಟಿಯ ಗುರಿ ಇದ್ದು, ಇದಕ್ಕಾಗಿ 1176 ಮನೆ ಭೇಟಿ ತಂಡಗಳು, 52 ಟ್ರಾನ್ಸಿಟ್ ತಂಡಗಳು ಹಾಗೂ 32 ಸಂಚಾರಿ ತಂಡಗಳು ಸೇರಿದಂತೆ ಒಟ್ಟು 1260 ತಂಡಗಳನ್ನು ನಿಯೋಜಿಸಲಾಗಿದ್ದು, ಒಟ್ಟು 2530 ಲಸಿಕಾ ಕಾರ್ಯಕರ್ತರು, 248 ಮೇಲ್ವಿಚಾರಕರು ಮತ್ತು 05 ತಾಲ್ಲೂಕುಗಳಿಗೆ ಉಸ್ತುವಾರಿ ಅಧಿಕಾರಿಗಳು ಕಾರ್ಯನಿರ್ವಹಿಸಲಿದ್ದಾರೆ. ಜಿಲ್ಲೆಯಲ್ಲಿ ಒಟ್ಟು 827 ಕ್ಲಿಷ್ಟಕರ ಸ್ಥಳಗಳನ್ನು ಗುರುತಿಸಲಾಗಿದೆ.



ಅಲ್ಲದೆ ಹಾಗೂ ಮನೆ ಬೇಟಿಯೊಂದಿಗೆ ಬಸ್ ನಿಲ್ದಾಣ, ರೈಲು ನಿಲ್ದಾಣ ಮತ್ತು ಸಂತೆ ಹಾಗೂ ಮಾರುಕಟ್ಟೆಗಳಲ್ಲಿ ನಿರಂತರವಾಗಿ ಲಸಿಕೆ ಹಾಕಲು ಇಲಾಖೆಯ ಸಿಬ್ಬಂದಿ ಹಾಗೂ ರಿಮ್ಸ್, ಎಸ್‌ಕೆಇ ಹಾಗೂ ನಂದನಿ ನರ್ಸಿಂಗ್ ಕಾಲೇಜು, ನವೋದಯ ವೈದ್ಯಕೀಯ ಮಹಾವಿದ್ಯಾಲಯ ಹಾಗೂ ತಾಲೂಕಾ ಕೇಂದ್ರಗಳಲ್ಲಿ ಸ್ಥಳಿಯ ನರ್ಸಿಂಗ್ ಕಾಲೇಜು ವಿಧ್ಯಾರ್ಥಿಗಳು, ಅಗತ್ಯವಿರುವಡೆ ಅಂಗನವಾಡಿ ಕಾರ್ಯಕರ್ತೆಯರು ಲಸಿಕಾ ಕಾರ್ಯದಲ್ಲಿ ಭಾಗವಹಿಸಲು ಸಿದ್ದತೆ ಮಾಡಿಕೊಳ್ಳಲಾಗಿದೆ. ಪ್ರೀಆ?ಯಕ್ಟಿವಿಟಿ: ಈಗಾಗಲೆ ಜಿಲ್ಲೆಯ ಅಂಗನವಾಡಿ, ನರ್ಸರಿ, ಮೊಂಟೆಸ್ಸರಿ, ಶಿಶುವಿಹಾಗಳಗಲ್ಲಿ ದಿನಾಂಕ 23,24,25 ರಂದು ಲಸಿಕೆ ಹಾಕಿ ನಿಗದಿತ ಗುರಿ ತಲುಪಲು ಶ್ರಮಿಸಲಾಗುತ್ತಿದೆ ಎಂದು ತಿಳಿಸಿದ್ದಾರೆ.

ಜಾಗೃತಿಗಾಗಿ ನಿರಂತರ : ಜಾಗೃತಿಗಾಗಿ ಶಾಲಾ ಮಕ್ಕಳಿಂದ ಜಾಥಾ, ಪ್ರಮುಖ ಸ್ಥಳಗಳಲ್ಲಿ ಪ್ಲೆಕ್ಸ್ ಅಳವಡಿಕೆ, ತ್ಯಾಜ್ಯ ವಿಲೇವಾರಿ ವಾಹನಗಳು ಆಟೋಗಳ ಮೂಲಕ ಜಿಂಗಲ್ಸ್‌ಗಳು, ಟಾಂಟಾಂ, ಸಾಮಾಜಿಕ ಜಾಲತಾಣಗಳ ಮೂಲಕ ರೀಲ್ಸ್, ಸಂದೇಶಗಳನ್ನು ನಿರಂತರವಾಗಿ ಬಿತ್ತರಿಸಲಾಗುತ್ತಿದೆ. ಕ್ಯೂ ಆರ್‌ಕೋಡ್ ಬಳಕೆ ನಗರ ಪ್ರದೇಶಗಳ ಬೂತ್ ಗುರ್ತಿಸಲು ಕ್ಯೂ ಆರ್ ಕೋಡ್‌ನ್ನು ಸಾರ್ವಜನಿಕರು ತಮ್ಮ ಮೊಬೈಲ್ ಮೂಲಕ ಸ್ಕ್ಯಾನ್ ಮಾಡಿ ಮಾಹಿತಿ ಪಡೆಯಬಹುದಾಗಿದೆ. ಜೂನ 28 ರಂದು ವಿಧ್ಯುಕ್ತವಾಗಿ ಚಾಲನೆಗೆ ಸಿದ್ದತೆ: ಅಲ್ಲದೆ ಜಿಲ್ಲಾ ಮಟ್ಟದಲ್ಲಿ ಮಾನ್ಯ ಶಾಸಕರು, ಜನಪ್ರತಿನಿಧಿಗಳು, ಜಿಲ್ಲಾಧಿಕಾರಿಗಳು, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಪಂ, ಮಹಾನಗರಪಾಲಿಕೆಯ ಆಯುಕ್ತರು ಹಾಗೂ ಗಣ್ಯರು ರಾಯಚೂರು ನಗರದ ಪಿ.ಎಮ್.ಶ್ರೀ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ, ಕೆಇಬಿ ಕಾಲೋನಿಯಲ್ಲಿ ಹಾಗೂ ಜಿಲ್ಲೆಯ ಅಯಾ ತಾಲೂಕುಗಳಲ್ಲಿ ಮಾನ್ಯ ಶಾಸಕರು ಹಾಗೂ ಜನಪ್ರತಿನಿಧಿಗಳು, ಗಣ್ಯರು ಭಾಗವಹಿಸಿ ವಿಧ್ಯುಕ್ತವಾಗಿ ಚಾಲನೆ ನೀಡಲಿದ್ದಾರೆ ಎಂದು ತಿಳಿಸಿದ್ದಾರೆ.

ಭಾರತ ಪೋಲಿಯೋ ಮುಕ್ತ, ಆದರೆ ಜಾಗ್ರತೆ ಅಗತ್ಯ: ದೇಶದಲ್ಲಿ ಕೊನೆಯ ಪೋಲಿಯೋ ಪ್ರಕರಣವು 2011ರ ಜನವರಿ 13 ರಂದು ಪಶ್ಚಿಮ ಬಂಗಾಳದ ಹೌರಾ ಜಿಲ್ಲೆಯಲ್ಲಿ ವರದಿಯಾಗಿತ್ತು. ಅದಾದ ಬಳಿಕ ಯಾವುದೇ ಹೊಸ ಪ್ರಕರಣಗಳು ಕಂಡುಬಂದಿಲ್ಲ. ಈ ಹಿನ್ನೆಲೆಯಲ್ಲಿ ವಿಶ್ವ ಆರೋಗ್ಯ ಸಂಸ್ಥೆಯು 2014 ರ ಫೆಬ್ರವರಿ 11ರಂದು ಭಾರತವನ್ನು 'ಪೋಲಿಯೋ ಮುಕ್ತ ರಾಷ್ಟ್ರ' ಎಂದು ಘೋಷಿಸಿದೆ. ಆದರೆ, ಭಾರತವನ್ನು ನಿರಂತರವಾಗಿ ಪೋಲಿಯೋ ಮುಕ್ತವಾಗಿಡಲು ಹಾಗೂ ಪೋಲಿಯೊ ಮೇಲಿನ ಗೆಲುವನ್ನು ಮುಂದುವರೆಸಲು ಎಲ್ಲರ ಜವಾಬ್ದಾರಿಯಾಗಿದೆ ಎಂದು ತಿಳಿಸಿದ್ದಾರೆ.

ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ. ನಂದಿತಾ ಎಮ್ ಎನ್, ಅವರು ಮಾಹಿತಿ ನೀಡಿ ಪೋಲಿಯೋ ವೈರಸ್‌ನಲ್ಲಿ 3 ವಿಧಗಳಿದ್ದು, ಅದರಲ್ಲಿ ಟೈಪ್ 2 ಮತ್ತು ಟೈಪ್ 3 ವೈರಸ್‌ಗಳು ಈಗಾಗಲೇ ನಿರ್ಮೂಲನೆಯಾಗಿವೆ. ಆದರೆ ಟೈಪ್ 1 ವೈರಸ್ ಪ್ರಕರಣಗಳು ಇಂದಿಗೂ ನೇರೆಯ ಪಾಕಿಸ್ತಾನ ಹಾಗೂ ಅಫಘಾನಿಸ್ಥಾನಗಳಲ್ಲಿ ಕಂಡು ಬರುತ್ತಿರುವುದರಿಂದ ನಾವು ಸದಾ ಜಾಗರೂಕರಾಗಿರಬೇಕು ಎಂದು ತಿಳಿಸಿದ್ದಾರೆ. ಇಗಾಗಲೆ ವಲಸೆ ಪ್ರದೇಶಗಳು, ಕೈಗಾರಿಕಾ ವಲಯಗಳು, ಇಟ್ಟಿಗೆ ಭಟ್ಟಿಗಳು, ಅಲೆಮಾರಿ ಕುರಿ ಸಾಕಾಣಿಕೆದಾರರ ತಾತ್ಕಾಲಿಕ ನಿವಾಸಿಗಳು, ಹಟ್ಟಿ, ತಾಂಡಾ, ತೋಟದ ಮನೆಗಳು ಹಾಗೂ ಕಟ್ಟಡ ನಿರ್ಮಾಣದ ಸ್ಥಳಗಳಲ್ಲಿರುವ ಮಕ್ಕಳನ್ನು ಗುರುತಿಸಿ ಲಸಿಕೆ ಹಾಕಲು ಕ್ರಿಯಾ ಯೋಜನೆಯಲ್ಲಿ ಹೆಚ್ಚಿನ ಆದ್ಯತೆ ನೀಡಲಾಗುವುದು ಎಂದು ತಿಳಿಸಿದ್ದಾರೆ.

ಈ ಹಿನ್ನಲೆಯಲ್ಲಿ ಜಿಲ್ಲೆಯ ಎಲ್ಲಾ ಸಾರ್ವಜನಿಕರು ಹಾಗೂ ಪಾಲಕರು ತಮ್ಮ ಹುಟ್ಟಿನಿಂದ 5 ವರ್ಷದೊಳಗಿನ ಎಲ್ಲಾ ಮಕ್ಕಳನ್ನು ತಪ್ಪದೇ ಹತ್ತಿರದ ಪೋಲಿಯೋ ಬೂತ್‌ಗಳಿಗೆ ಕರೆತಂದು, ಜೂನ್ 28. 2026 ರ ಭಾನುವಾರದಂದು 'ಎರಡು ಹನಿ' ಪೋಲಿಯೋ ಲಸಿಕೆ ಕೊಡಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಅವರು ಮನವಿ ಮಾಡಿದ್ದಾರೆ.

## ಶಿಕ್ಷಣ ಮಾರ್ಗದರ್ಶಿ ವಿಶೇಷ

### Secretarial Practice -

"ಸಚಿವಾಲಯ ಕಾರ್ಯಪದ್ಧತಿ ವೃತ್ತಿಯ ಒಂದು ವರ್ಷದ ತರಬೇತಿ ಅವಧಿಯಲ್ಲಿ, ತರಬೇತಿಗಾರರಿಗೆ ಉದ್ಯೋಗ ಸಂಬಂಧಿತ ವೃತ್ತಿಪರ ಕೌಶಲ್ಯಗಳು (Professional Skill), ವೃತ್ತಿಪರ ಜ್ಞಾನ (Professional Knowledge) ಹಾಗೂ ಉದ್ಯೋಗಾರ್ಹತಾ ಕೌಶಲ್ಯಗಳು (Employability Skills) ಬೋಧಿಸಲಾಗುತ್ತದೆ.

ಇದರ ಜೊತೆಗೆ, ತರಬೇತಿಗಾರರಿಗೆ ಯೋಜನಾ ಕಾರ್ಯಗಳು (Project Work), ಪಠ್ಯೇತರ ಚಟುವಟಿಕೆಗಳು (Extra-curricular Activities) ಹಾಗೂ ಉದ್ಯೋಗ ಸ್ಥಳದಲ್ಲಿನ ತರಬೇತಿ (ಔಟಿ-ಣುಜ-ಎಠಥ ಖಿಡಿಚಿಟಟಿಟಿಠ) ನೀಡಲಾಗುತ್ತದೆ, ಇದರಿಂದ ಅವರ ಆತ್ಮವಿಶ್ವಾಸ ಹಾಗೂ ಕಾರ್ಯಕ್ಷಮತೆ ವೃದ್ಧಿಯಾಗುತ್ತದೆ. ವೃತ್ತಿಪರ ಕೌಶಲ್ಯದ ಪ್ರಮುಖ ಅಂಶಗಳು: ತರಬೇತಿಗಾರರು ಮೊದಲು ಸುರಕ್ಷತೆ ಮತ್ತು ಪರಿಸರ ಸಂರಕ್ಷಣೆ, ಕಾರ್ಯಾಲಯ ಇಂಗ್ಲಿಷ್ ಬಳಕೆ ಹಾಗೂ ಕೃತಕ ಉಸಿರಾಟ ಪುನಶ್ಚೇತನ (Artificial Respiratory Resuscitation) ಕುರಿತು ತಿಳಿದುಕೊಳ್ಳುತ್ತಾರೆ. ಅವರು ಕಂಪ್ಯೂಟರ್‌ನ ಮೂಲಭೂತ ಅಂಶಗಳು ಮತ್ತು ಅದರ ಪರಿಕರಗಳ (Peripherals) ಬಗ್ಗೆ ಜ್ಞಾನ ಪಡೆಯುತ್ತಾರೆ. ಶಾರ್ಟ್‌ಹ್ಯಾಂಡ್‌ನಲ್ಲಿರುವ ವ್ಯಂಜನಗಳು, ಅವುಗಳ ದಿಕ್ಕು ಮತ್ತು ಜೋಡಣೆ, ದೀರ್ಘ ಹಾಗೂ ಹ್ರಸ್ವ ಸ್ವರಗಳು, ಲೋಗೋಗ್ರಾಮ್‌ಗಳು (LOGOGRAMS), ಗ್ರಾಮಲೋಗ್‌ಗಳು (Grammalogues), ಸಂಕ್ಷಿಪ್ತ ರೂಪಗಳು (Contractions), 'ಖಿಜ' ಪದದ ಬಳಕೆ ಹಾಗೂ ವಿರಾಮ ಚಿಹ್ನೆಗಳ ಬಳಕೆಯನ್ನು ಕಲಿಯುತ್ತಾರೆ. ದ್ವಿಸ್ವರಗಳು (Diphthongs), ವಿಂಡೋಸ್ ಕಾರ್ಯಾಚರಣಾ ವ್ಯವಸ್ಥೆಯ (Windows Operating System) ಬಳಕೆ, ಪರ್ಯಾಯ ರೂಪಗಳ ಹೋಲಿಕೆ, ಕಂಪ್ಯೂಟರ್ ಕೀಬೋರ್ಡ್‌ನಲ್ಲಿ ಬೆರಳುಗಳ ಸರಿಯಾದ ಸ್ಥಾನ, ಖಊಖ ಮತ್ತು SHL ಗುರುತುಗಳ ದಿಕ್ಕು, ವಕ್ರ ಹಾಗೂ ಹುಕ್ ಹೊಂದಿದ ಸ್ಟ್ರೋಕ್‌ಗಳು, ಸಂಯುಕ್ತ ವ್ಯಂಜನಗಳು, ಅಂತಿಮ ಹುಕ್‌ಗಳು (Final Hooks), ಪೂರ್ವಪ್ರತ್ಯಯ ಮತ್ತು ಉತ್ತರಪ್ರತ್ಯಯಗಳ (Prefixes and Suffixes) ಬಳಕೆ ಹಾಗೂ ಹಣಕಾಸು ಘಟಕಗಳ (Monetary Units) ಗುರುತಿಸುವಿಕೆ ಮತ್ತು ಬಳಕೆಯನ್ನು ಕಲಿಯುತ್ತಾರೆ. ಈ ತರಬೇತಿಯ ಮೂಲಕ ಶಾರ್ಟ್‌ಹ್ಯಾಂಡ್ ಬರವಣಿಗೆ, ಭಾಷಾಂತರ, ಟಿಪ್ಪಣಿ ತೆಗೆದುಕೊಳ್ಳುವ ತಂತ್ರಗಳು ಹಾಗೂ MS-Word ನಲ್ಲಿ ವೇಗದ ಟೈಪಿಂಗ್ ಕೌಶಲ್ಯಗಳನ್ನು ಅಭಿವೃದ್ಧಿಪಡಿಸಿಕೊಳ್ಳುತ್ತಾರೆ. ಕಚೇರಿ ನಿರ್ವಹಣೆ ಮತ್ತು ಕಂಪ್ಯೂಟರ್ ಅನ್ವಯಿಕೆಗಳು: ತರಬೇತಿಗಾರರು MS-Excel ನಲ್ಲಿ ಡೇಟಾ ನಿರ್ವಹಣೆ, ಕಚೇರಿ ಸಾಮಗ್ರಿಗಳ ನಿರ್ವಹಣೆ, ಸರಳ ಲೆಕ್ಕಪತ್ರಗಳನ್ನು ಸೂತ್ರಗಳು (Formulas) ಮತ್ತು ಕಾರ್ಯಗಳ (Functions) ಸಹಾಯದಿಂದ ನಿರ್ವಹಿಸುವುದು, ಕಚೇರಿ ವಿನ್ಯಾಸವನ್ನು (Office Layout) ಗುರುತಿಸುವುದು ಹಾಗೂ ಡಿಸ್ಪ್ಯಾಚ್ ಮತ್ತು ಡೈರಿ ರಿಜಿಸ್ಟರ್‌ಗಳನ್ನು ನಿರ್ವಹಿಸುವುದನ್ನು ಕಲಿಯುತ್ತಾರೆ. ಕಂಪ್ಯೂಟರ್ ಡೇಟಾ ಸುರಕ್ಷತೆ, ವಿವಿಧ ಕಡತಗಳ (Files) ಅಗತ್ಯತೆಗಳನ್ನು ಗುರುತಿಸಿ MS-PowerPoint ನಲ್ಲಿ ಅನುಷ್ಠಾನಗೊಳಿಸುವುದು, ಪರಿಣಾಮಕಾರಿ ಪ್ರಸ್ತುತೀಕರಣ (Presentation) ತಯಾರಿಸುವುದು, ಇಂಟರ್ನೆಟ್ ಬ್ರೌಸರ್ ಮೂಲಕ ಮಾಹಿತಿಯನ್ನು ಹುಡುಕುವುದು, ಇ-ಮೇಲ್ ಐಡಿ ರಚಿಸುವುದು ಮತ್ತು ಇ-ಮೇಲ್ ಮೂಲಕ ಪತ್ರವ್ಯವಹಾರ ನಡೆಸುವುದನ್ನು ಅಭ್ಯಾಸ ಮಾಡುತ್ತಾರೆ. ಅಲ್ಲದೆ, ಆನ್‌ಲೈನ್ ಅರ್ಜಿಗಳು ಮತ್ತು ನೋಂದಣಿ ದಾಖಲೆಗಳನ್ನು ಭರ್ತಿ ಮಾಡುವುದು, ರೈಲು, ಬಸ್, ವಿಮಾನ ಹಾಗೂ ಹೋಟೆಲ್ ಟಿಕೆಟ್‌ಗಳನ್ನು ಕಾಯ್ದಿರಿಸುವುದು, ವಿವಿಧ ಕಚೇರಿ ಉಪಕರಣಗಳು ಮತ್ತು ಸಾಧನಗಳನ್ನು ಗುರುತಿಸುವುದು, ಅಂಚೆ ಸೇವೆಗಳ ಬಳಕೆಯನ್ನು ಅರ್ಥಮಾಡಿಕೊಳ್ಳುವುದು ಹಾಗೂ ವಿವಿಧ ಅಧಿಕೃತ ಪತ್ರಗಳು, ನೋಟಿಸ್‌ಗಳು, ಅಜೆಂಡಾ, ಸಭಾ ವರದಿಗಳು (Minutes), ವರದಿಗಳು, ಸುತ್ತೋಲೆಗಳು (Circulars) ಮತ್ತು ಸ್ಮರಣ ಪತ್ರಗಳು (Memorandum) ತಯಾರಿಸುವುದನ್ನು ಕಲಿಯುತ್ತಾರೆ. ತರಬೇತಿಯ ಅಂತ್ಯದಲ್ಲಿ ತರಬೇತಿಗಾರರು: ಕಾರ್ಯಕ್ರಮಗಳ ಕ್ಯಾಲೆಂಡರ್ ನಿರ್ವಹಣೆ ಮಾಡಬಹುದು. ಸಾಮಾನ್ಯ ಬ್ಯಾಂಕಿಂಗ್ ಪತ್ರವ್ಯವಹಾರಗಳನ್ನು ನಿರ್ವಹಿಸಬಹುದು. ಕಚೇರಿ ಕಾರ್ಯಗಳನ್ನು ಸಮರ್ಥವಾಗಿ ನಿರ್ವಹಿಸುವ ಕೌಶಲ್ಯಗಳನ್ನು ಪಡೆದುಕೊಳ್ಳುತ್ತಾರೆ. ಕಂಪ್ಯೂಟರ್ ಆಧಾರಿತ ಕಾರ್ಯಗಳು ಮತ್ತು ಆನ್‌ಲೈನ್ ಸೇವೆಗಳನ್ನು ಪರಿಣಾಮಕಾರಿಯಾಗಿ ಬಳಸಲು ಸಮರ್ಥರಾಗುತ್ತಾರೆ

# ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಖಾಲಿ ಹುದ್ದೆಗಳ ನೇಮಕಾತಿ

**ಈ ಪ್ರಕ್ರಿಯೆಯನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಲು ಉನ್ನತ ಮಟ್ಟದ ಅಧಿಕಾರಿಗಳನ್ನು ಮೇಲುಸ್ತುವಾರಿಗೆ ನೇಮಿಸುವ ಸಂಬಂಧ ಸರ್ಕಾರ ಮಹತ್ವದ ಆದೇಶ ಹೊರಡಿಸಿದೆ.**

❑ ನೈಜ್ಯ ದೆಸೆ ನ್ಯೂಸ್

**ಬೆಂಗಳೂರು : ಸರ್ಕಾರದ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಒಟ್ಟು 72,186 ಹುದ್ದೆಗಳ ಭರ್ತಿಗೆ ಈಗಾಗಲೇ ಅನುಮೋದನೆ ನೀಡಲಾಗಿದೆ. ಇದರಲ್ಲಿ 2023–24ರಿಂದ ಇದುವರೆಗೆ 40,009 ಹುದ್ದೆಗಳಿಗೆ ಆರ್ಥಿಕ ಇಲಾಖೆಯು ಸಹಮತಿ ನೀಡಿದ್ದು, ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದದ 32,177 ಖಾಲಿ ಹುದ್ದೆಗಳ ಭರ್ತಿಗೂ ಪರಿಭಾವಿತ ಸಹಮತಿ ನೀಡಲಾಗಿದೆ.**

ನೇಮಕಾತಿ ಪ್ರಕ್ರಿಯೆಯನ್ನು ವೇಗಗೊಳಿಸುವ ಉದ್ದೇಶದಿಂದ ಆಯ್ಕೆ ಪ್ರಾಧಿಕಾರಗಳಿಂದ ಕ್ರಿಯಾ ಯೋಜನೆಗಳನ್ನು ಪಡೆದು ಸಚಿವ ಸಂಪುಟಕ್ಕೆ ಮಂಡಿಸಲಾಗಿತ್ತು. ಅದರಂತೆ ಸಚಿವ ಸಂಪುಟವು 17 ಇಲಾಖೆಗಳ ನೇರ ನೇಮಕಾತಿ ಹುದ್ದೆಗಳ ಭರ್ತಿಯ ಮೇಲ್ವಿಚಾರಣೆಗೆ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರಿಗೆ ಜವಾಬ್ದಾರಿ ನೀಡಿದೆ. ಅದೇ ರೀತಿ 34 ಇಲಾಖೆಗಳ ನೇರ ನೇಮಕಾತಿ ಹುದ್ದೆಗಳ ಭರ್ತಿಯ ಮೇಲ್ವಿಚಾರಣೆಗೆ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗೆ ಜವಾಬ್ದಾರಿ ನೀಡಲಾಗಿದೆ. ಸರ್ಕಾರದ ಆದೇಶ ಸಂಖ್ಯೆ: ಅಖ/21/ಉಇಓ/2026, ಬೆಂಗಳೂರು, ದಿನಾಂಕ 24.06.2026 ರಂದು ಈ ಆದೇಶ ಹೊರಡಿಸಲಾಗಿದೆ. ಸರ್ಕಾರವು ಎಲ್ಲಾ ಇಲಾಖೆಗಳಿಗೂ ಸ್ಪಷ್ಟ ಗಡುವು ನಿಗದಿ ಮಾಡಿದ್ದು, ಮುಂದಿನ 2 ತಿಂಗಳುಗಳಲ್ಲಿ ನೇಮಕಾತಿ ಅಧಿಸೂಚನೆ ಪ್ರಕಟಿಸಬೇಕು, ಮುಂದಿನ 4 ತಿಂಗಳುಗಳಲ್ಲಿ ನೇಮಕಾತಿ ಪರೀಕ್ಷೆಗಳನ್ನು ನಡೆಸಬೇಕು, ಮುಂದಿನ 6 ತಿಂಗಳುಗಳಲ್ಲಿ ನೇಮಕಾತಿ ಪ್ರಕ್ರಿಯೆ ಪೂರ್ಣಗೊಳಿಸಿ ನೇಮಕಾತಿ ಆದೇಶಗಳನ್ನು ಕಡ್ಡಾಯವಾಗಿ ಹೊರಡಿಸಬೇಕು ಎಂದು ಸೂಚಿಸಿದೆ. ಈ ಆದೇಶವನ್ನು ಸಚಿವ ಸಂಪುಟ ಪ್ರಕರಣ ಸಂಖ್ಯೆ ಸಿ 332/2026, ದಿನಾಂಕ 20.06.2026 ರಂದು ನೀಡಿದ ನಿರ್ದೇಶನದ ಅನ್ವಯ ಹೊರಡಿಸಲಾಗಿದೆ. ಈ ಮೂಲಕ ರಾಜ್ಯದ ವಿವಿಧ ಇಲಾಖೆಗಳಲ್ಲಿ ದೀರ್ಘಕಾಲದಿಂದ ಖಾಲಿ ಉಳಿದಿರುವ ಹುದ್ದೆಗಳ ಭರ್ತಿಗೆ ವೇಗ ಸಿಗುವ ನಿರೀಕ್ಷೆ ವ್ಯಕ್ತವಾಗಿದೆ.

# ಪಲ್ಸ್ ಪೋಲಿಯೋ ಲಸಿಕಾ ಅಭಿಯಾನ: ಪ್ರತಿ ಮಗುವಿನ ಆರೋಗ್ಯಕ್ಕೂ ಭದ್ರ ಬುನಾದಿ

❑ ನೈಜ್ಯ ದೆಸೆ ನ್ಯೂಸ್

**ಮಕ್ಕಳ ಆರೋಗ್ಯವೇ ದೇಶದ ಭವಿಷ್ಯ. ಮಾರಕ ಪೋಲಿಯೋ ರೋಗವನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡುವ ಗುರಿಯೊಂದಿಗೆ, ಭಾರತ ಮತ್ತು ಕರ್ನಾಟಕ ಸರ್ಕಾರವು ಪ್ರತಿವರ್ಷದಂತೆ ಈ ವರ್ಷವೂ 'ಪಲ್ಸ್ ಪೋಲಿಯೋ ಲಸಿಕಾ ಅಭಿಯಾನ'ವನ್ನು ಹಮ್ಮಿಕೊಂಡಿದೆ.**



ನಮ್ಮ ರಾಜ್ಯದಲ್ಲಿ ಈ ಅಭಿಯಾನವು 28-06-2026 ರಿಂದ 01-07-2026 ರ ವರೆಗೆ ನಡೆಯಲಿದೆ. ಐದು ವರ್ಷದೊಳಗಿನ ಪ್ರತಿಯೊಂದು ಮಗುವಿಗೂ ಪೋಲಿಯೋ ಲಸಿಕೆಯನ್ನು ನೀಡುವುದರ ಮೂಲಕ ರೋಗವನ್ನು ತಡೆಗಟ್ಟುವುದು ಮತ್ತು ದೇಶವನ್ನು ಪೋಲಿಯೋ ಮುಕ್ತವಾಗಿ ಕಾಯ್ದುಕೊಳ್ಳುವುದು ಈ ಅಭಿಯಾನದ ಮುಖ್ಯ ಉದ್ದೇಶವಾಗಿದೆ. ಪೋಲಿಯೋ ಕಾಯಿಲೆಯು ಶಾಶ್ವತ ಅಂಗವೈಕಲ್ಯಕ್ಕೆ ಕಾರಣವಾಗಬಹುದು, ಆದರೆ 'ಎರಡು ಹನಿ' ಲಸಿಕೆಯಿಂದ ಈ ರೋಗವನ್ನು ಸಂಪೂರ್ಣವಾಗಿ ತಡೆಯಬಹುದು.

0 ರಿಂದ 5 ವರ್ಷದೊಳಗಿನ ಎಲ್ಲಾ ಮಕ್ಕಳು ಲಸಿಕೆಯನ್ನು ಪಡೆಯುವುದು ಕಡ್ಡಾಯ. ಮಗುವು ಈಗಾಗಲೇ ಸಾಮಾನ್ಯ ಲಸಿಕಾ ಕಾರ್ಯಕ್ರಮದಡಿ ಪೋಲಿಯೋ ಲಸಿಕೆಯನ್ನು ಪಡೆದಿದ್ದರೂ, ಈ ವಿಶೇಷ ಅಭಿಯಾನದ ಸಂದರ್ಭದಲ್ಲಿ ಮತ್ತೆ ಲಸಿಕೆ ಹಾಕಿಸುವುದು ಅತ್ಯಗತ್ಯ. ಇದು ಹೆಚ್ಚುವರಿ ರಕ್ಷಣೆಯನ್ನು ನೀಡುತ್ತದೆ. ನಿಮ್ಮ ಹತ್ತಿರದ ಅಂಗನವಾಡಿ ಕೇಂದ್ರಗಳು, ಸರ್ಕಾರಿ ಆಸ್ಪತ್ರೆಗಳು, ಶಾಲೆಗಳು ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಲಸಿಕಾ ಬೂತ್‌ಗಳನ್ನು ತೆರೆಯಲಾಗಿದೆ. ನಿಮ್ಮ ಮನೆಯಲ್ಲಿ ಅಥವಾ ನೆರೆಹೊರೆಯಲ್ಲಿ 5 ವರ್ಷದೊಳಗಿನ ಮಕ್ಕಳಿದ್ದರೆ, ಅವರನ್ನು ತಪ್ಪದೇ ಹತ್ತಿರದ ಬೂತ್‌ಗೆ ಕರೆದೊಯ್ಯಿರಿ. "ಎರಡು ಹನಿ – ಭವಿಷ್ಯಕ್ಕೆ ಭರವಸೆ". ಬನ್ನಿ, ನಮ್ಮ ಮಕ್ಕಳನ್ನು ಪೋಲಿಯೋ ಮುಕ್ತ ಆರೋಗ್ಯವಂತ ಪ್ರಜೆಗಳನ್ನಾಗಿ ರೂಪಿಸೋಣ. ನಿಮ್ಮ ಹತ್ತಿರದ ಪ್ರಾಥಮಿಕ ಆರೋಗ್ಯ ಕೇಂದ್ರ ಅಥವಾ ಆಶಾ ಕಾರ್ಯಕರ್ತರನ್ನು ಸಂಪರ್ಕಿಸಿ.

# ಲಿಂ. ಬಸವಪ್ರೀಯ ಅಪ್ಪಣ್ಣ ಮಹಾಸ್ವಾಮಿಗಳ 18ನೇ ವರ್ಷದ ಪುಣ್ಯಸ್ಮರಣೆ

**ನಿಮಿತ್ತವಾಗಿ ಬುದ್ದಿ ಮಾಧ್ಯರಿಗೆ ಉಚಿತವಾಗಿ ಕ್ಷೌರ ಸೇವೆ2030 ಕ್ಕೂ ಹೆಚ್ಚು ಅನಾಥರಿಗೆ ಉಚಿತವಾಗಿ ಕ್ಷೌರ ಸೇವೆ ಸಲ್ಲಿಸಿದ ನಿಸ್ವಾರ್ಥ ಸಮಾಜದ ಸೇವಕ ಎಮ್.ಬಿ ಹಡಪದ ಸುಗೂರ ಎನ್.**

❑ ನೈಜ್ಯ ದೆಸೆ ನ್ಯೂಸ್

**ಕಲಬುರಗಿ: ಅಪರೂಪದ ನಿಸ್ವಾರ್ಥ ಸೇವೆ ಸಲ್ಲಿಸಿದ ಹಡಪದ ಸಮಾಜದ ಸೇವಕ ಸಮಾಜಮುಖಿ ಚಟುವಟಿಕೆಗಳನ್ನು ಇದೇ ಕಲಬುರಗಿ ಜಿಲ್ಲೆಯ ಚಿತ್ತಾಪುರ ತಾಲೂಕಿನ ನಾಲವಾರ ಗ್ರಾಮದಲ್ಲಿ ಇರುವ "ಜನಪ್ರೀಯ ಹೇರ್ ಸಲೂನ್ ಮತ್ತು ಚಂದ್ರಿಕಾ ಬ್ಯೂಟಿ ಪಾರ್ಲರ್ ನಲ್ಲಿ ಕಲಬುರಗಿ ಜಿಲ್ಲೆಯ ಹಡಪದ ಅಪ್ಪಣ್ಣ ಸಮಾಜದ ಜಿಲ್ಲಾ ಸಂಘಟನಾ ಕಾರ್ಯದರ್ಶಿ ಡಾ.ಮಲ್ಲಿಕಾರ್ಜುನ ಬಿ ಹಡಪದ ಸುಗೂರ ಎನ್ ಅವರು 65 ಕ್ಕೂ ಹೆಚ್ಚು ಬುದ್ದಿ ಮಾಧ್ಯರಿಗೆ (ವಿಕಲಚೇತನರಿಗೆ) ಗ್ರಾಮೀಣ ಭಾಗದಲ್ಲಿ ಈ ಸೇವೆ ಸಲ್ಲಿಸಿದ್ದಾರೆ.**



ಹಡಪದ ಅಪ್ಪಣ್ಣ ಸಮಾಜದ ಪ್ರಪ್ರಥಮ ಪೀಠಾಧಿಪತಿಗಳಾದ ಪರಮ ಪೂಜ್ಯ ಲಿಂ. ಬಸವಪ್ರೀಯ ಅಪ್ಪಣ್ಣ ಮಹಾಸ್ವಾಮಿಗಳ 18ನೇ ವರ್ಷದ ಪುಣ್ಯಸ್ಮರಣೆ ನಿಮಿತ್ತವಾಗಿ 65 ಕ್ಕೂ ಹೆಚ್ಚು ಜನತೆಗೆ ಉಚಿತವಾಗಿ ಕ್ಷೌರ ಸೇವೆ ಸಲ್ಲಿಸಿದ್ದಾರೆ. ಇಲ್ಲಿಯವರೆಗೆ ಒಟ್ಟು 2030 ಕ್ಕೂ ಹೆಚ್ಚು ಅನಾಥರಿಗೆ. ಉಚಿತವಾಗಿ ಕ್ಷೌರ ಸೇವೆ ಅವರು ತಮ್ಮ ಕಾಯಕ ವೃತ್ತಿಯಲ್ಲಿ ಸೇವೆ ಸಲ್ಲಿಸಿದ್ದಾರೆ. ಸಮಾಜದ ಜಾಗೃತಿಗಾಗಿ 'ಜ್ಯೋತಿ ಯಾತ್ರೆ' ನಡೆಸಿದ ಹಡಪದ ಸಮಾಜದ ಆರಾಧ್ಯ ದೈವ ಹಾಗೂ 12ನೇ ಶತಮಾನದ ವಚನಕಾರರೆಂದರೆ ನಿಜಸುಖಿ ಹಡಪದ ಅಪ್ಪಣ್ಣ ಬಸವಣ್ಣನವರ ಆಪ್ತ ಕಾರ್ಯದರ್ಶಿಯಾಗಿದ್ದ ಇವರು, ಸಮಾಜದಲ್ಲಿನ ಮೂಢನಂಬಿಕೆ ಮತ್ತು ಅಸಮಾನತೆಯನ್ನು ಹೋಗಲಾಡಿಸಲು ಮೂಲಕ ಲಿಂ.ಬಸವಪ್ರೀಯ ಅಪ್ಪಣ್ಣ ಮಹಾಸ್ವಾಮಿಗಳು ಶ್ರಮಿಸಿದ್ದಾರೆ. ಹಾಗಾಗಿ ಹಡಪದ ಅಪ್ಪಣ್ಣ ಸಮಾಜದ ಪ್ರಪ್ರಥಮ ಪೀಠಾಧಿಪತಿಗಳಾದ ಪರಮ ಪೂಜ್ಯ ಲಿಂ.ಬಸವಪ್ರೀಯ ಅಪ್ಪಣ್ಣ ಮಹಾಸ್ವಾಮಿಗಳ 18ನೇ ವರ್ಷದ ಸ್ಮರಣಾರ್ಥವಾಗಿ ಹಾಗೂ ಸಮಾಜ ಸಂಘಟನೆಗಾಗಿ ಇತ್ತೀಚಿನ ವರ್ಷಗಳಲ್ಲಿ ರಾಜ್ಯಾದ್ಯಂತ 'ಹಡಪದ ಅಪ್ಪಣ್ಣ ಜ್ಯೋತಿ ಯಾತ್ರೆ'ಗಳನ್ನು ಆಯೋಜಿಸಿ ಸಮಾಜದ ಜನ ಜಾಗೃತಿಗಾಗಿ 'ಜ್ಯೋತಿ ಯಾತ್ರೆ' ನಡೆಸಿದ ಹಡಪದ ಸಮಾಜದ ಆರಾಧ್ಯ ದೈವ ಹಾಗೂ 12ನೇ ಶತಮಾನದ ವಚನಕಾರರೆಂದರೆ ನಿಜಸುಖಿ ಹಡಪದ ಅಪ್ಪಣ್ಣ ಬಸವಣ್ಣನವರ ಆಪ್ತ ಕಾರ್ಯದರ್ಶಿಯಾಗಿದ್ದ ಇವರು, ಸಮಾಜದಲ್ಲಿನ ಮೂಢನಂಬಿಕೆ ಮತ್ತು ಅಸಮಾನತೆಯನ್ನು ಹೋಗಲಾಡಿಸಲು ಅಪಾರ ಮತ್ತು ಹಡಪದ ಅಪ್ಪಣ್ಣ ನವರ ಸಮಾಜವನ್ನು ಈ ಪ್ರಪ್ರಥಮ ಪೀಠಾಧಿಪತಿಗಳಾದ ಪರಮ ಪೂಜ್ಯ ಲಿಂ.ಬಸವಪ್ರೀಯ ಅಪ್ಪಣ್ಣ ಮಹಾಸ್ವಾಮಿಗಳು ಶ್ರಮಿಸಿದ್ದಾರೆ.

ಈ ಪೂಜ್ಯರ ಸ್ಮರಣಾರ್ಥವಾಗಿ ಈ ನಿಸ್ವಾರ್ಥ ಸಮಾಜದ ಸೇವಕ ಮಲ್ಲಿಕಾರ್ಜುನ ಬಿ ಹಡಪದ ಸುಗೂರ



ಎನ್ ಅವರು ಕುಟುಂಬದ ನೋವು, ಸಮಾಜ ಸೇವೆಯ ಬದುಕು "ಕ್ಷೌರಿಕ ವೃತ್ತಿಯಲ್ಲಿ' ಅವರು ಬದುಕಿನಲ್ಲಿ ಎಷ್ಟೇ ಸಂಕಷ್ಟಗಳು ಎದುರಾದರೂ ದುಡಿಮೆ ಮತ್ತು ಆತ್ಮವಿಶ್ವಾಸ ಇದ್ದರೆ ಜೀವನವನ್ನು ಸಾಗಿಸಬಹುದು ಎಂಬುದಕ್ಕೆ ಕಲಬುರಗಿ ಜಿಲ್ಲೆಯ ಚಿತ್ತಾಪುರ ತಾಲೂಕಿನ ಸುಗೂರ ಎನ್ ಗ್ರಾಮದ ನಿವಾಸಿ ಹಡಪದ (ಕ್ಷೌರಿಕ)ವೃತ್ತಿಯಲ್ಲಿ ಮಲ್ಲಿಕಾರ್ಜುನ ಬಿ ಹಡಪದ ಸುಗೂರ ಎನ್ ಅವರು ಜೀವಂತ ಉದಾಹರಣೆಯಾಗಿದ್ದಾರೆ.ಕಳೆದ 18 ವರ್ಷಗಳಿಂದ ದುಡಿಮೆಯನ್ನೇ ಜೀವನದ ಆಧಾರವಾಗಿಸಿಕೊಂಡಿರುವ ಅವರು,ಅನೇಕ ಏರುಪೇರುಗಳ ನಡುವೆಯೂ ಇಂದು ಮತ್ತೆ ' ತಮ್ಮ ವೃತ್ತಿ ಮಾಡಿ ಜೀವನ ಸಾಗಿಸುತ್ತಿದ್ದಾರೆ. ಮೂಲತಃ ಕಲಬುರಗಿ ಜಿಲ್ಲೆಯವರಾದ ಮಲ್ಲಿಕಾರ್ಜುನ ಅವರು ಉದ್ಯೋಗದ ಹುಡುಕಾಟದಲ್ಲಿ ಕೆಲವು ವರ್ಷಗಳ ಹಿಂದೆ ಬೆಂಗಳೂರು. ವಲಸೆ ಹೋಗಿದ್ದರು. ಅಲ್ಲಿ ಸಹ ಖಾಸಗಿ ಕಂಪನಿಯಲ್ಲಿ ದುಡಿದು ಕುಟುಂಬದ ಜವಬ್ದಾರಿ ಹೊತ್ತುಕೊಂಡ ಅವರು,ಬಳಿಕ 2025 ರಲ್ಲಿ ಸ್ವ ಗ್ರಾಮ ಕ್ಕೆ ಮರಳಿ ಹೊಸ ಬದುಕು ಕಟ್ಟಿಕೊಳ್ಳಲು ಮುಂದಾದರು.

ಕುಟುಂಬದ ಭವಿಷ್ಯ ಉತ್ತಮವಾಗಿರಲಿ ಎಂಬ ಆಶಯದಿಂದ ಖಾಸಗಿ ಕಂಪನಿಯಲ್ಲಿ. ಮತ್ತು ಅಂಗಡಿಗಳಲ್ಲಿ ಸೇರಿದಂತೆ ಹಲವು ಸಣ್ಣ-ಪುಟ್ಟ ತಮ್ಮ ವೃತ್ತಿ ಉದ್ಯಮಗಳಲ್ಲಿ ತೊಡಗಿಕೊಂಡು ತಮ್ಮದೇ ಆದ ಗುರುತನ್ನು ಸಮಾಜದಲ್ಲಿ ನಿರ್ಮಿಸಿಕೊಂಡಿದ್ದರು. ಒಂದು ಹೆಣ್ಣು ಮಗಳು ಹಾಗೂ ಒಬ್ಬ ಗಂಡು ಮಕ್ಕಳ. ಮತ್ತು ತಂದೆ ತಾಯಿಯರ ಹಾಗೂ ಸಹೋದರರ ಜವಾಬ್ದಾರಿಯನ್ನು ಹೊತ್ತುಕೊಂಡು ಕುಟುಂಬಕ್ಕಾಗಿ ಹಗಲಿರುಳು ಶ್ರಮಿಸಿದ ಅವರು,ಈಗ ಸ್ವತಃ ತಮ್ಮ ಕಾಯಕ ವೃತ್ತಿಯಲ್ಲಿ ಅಂಗಡಿ ನಡೆಸುವ ಮೂಲಕವೂ ಜೀವನ ಸಾಗಿಸುತ್ತಿದ್ದಾರೆ. ಸಮಾಜದ ಸಂಘಟನಾ ಜೊತೆಗೆ ಕುಟುಂಬದ ನಿರ್ವಹಣೆ ನಡುವೆಯೂ ಅವರು ಬದುಕಿನ ಹೋರಾಟವನ್ನು ನಿಲ್ಲಿಸಿಲ್ಲ. ಸಮಾಜ ಸೇವೆಯ ಮನೋಭಾವವನ್ನು ಉಳಿಸಿಕೊಂಡಿರುವುದು ವಿಶೇಷವಾಗಿದೆ.

ಉಚಿತ ಕ್ಷೌರ ಸೇವೆ ನೀಡುತ್ತಿರುವ ಅವರು, ಅಂಗವಿಕಲರು. ಅಂಧರು. ಅನಾಥ ಆಶ್ರಮದ ಹಿರಿಯ ವೃದ್ದರಿಗೆ. ಅನಾಥ ಆಶ್ರಯ ನಿರ್ಗತಿಕರ ಕೇಂದ್ರ ನಿರಾಶ್ರಿತರಿಗೆ. ಕಟ್ಟಡ ಕಾರ್ಮಿಕರಿಗೆ . ಪೌರ ಕಾರ್ಮಿಕರಿಗೆ . ಸಾಧು-ಸಂತರಿಗೆ. ವಿಕಲಚೇತನರಿಗೆ (ಮೂಕರಿಗೆ). ಬುದ್ದಿ ಮಾಧ್ಯರಿಗೆ. ಕುರುಡರಿಗೆ. ಅನಾಥ ಮಕ್ಕಳಿಗೆ. ಶಾಲಾ-ಕಾಲೇಜು ವಿದ್ಯಾರ್ಥಿಗಳಿಗೆ ಪ್ರೀಯಾಗಿ ಸೇವೆ ಒದಗಿಸಿ ಮಾನವೀಯತೆಯ ಮಾದರಿಯಾಗಿದ್ದಾರೆ. ಸಂಕಷ್ಟಗಳ ನಡುವೆಯೂ ಇತರರ ಕಷ್ಟಕ್ಕೆ ಸ್ಪಂದಿಸುವ ಅವರ ಮನೋಭಾವ ಸ್ಥಳೀಯರ ಮೆಚ್ಚುಗೆಗೆ ಪಾತ್ರವಾಗಿದೆ. ಕುಟುಂಬದ ಅಸಹಕಾರ, ಆರ್ಥಿಕ ಸಂಕಷ್ಟ ಮತ್ತು ಏಕಾಂತ ಬದುಕಿನ ನೋವಿನ ನಡುವೆಯೂ ಸಮಾಜಮುಖಿ ಕಾರ್ಯಗಳನ್ನು ಮಲ್ಲಿಕಾರ್ಜುನ ಬಿ ಹಡಪದ ಸುಗೂರ ಎನ್ ಅವರು ಮುಂದುವರಿಸಿಕೊಂಡು ಬರುತ್ತಿರುವುದು ಶ್ಲಾಘನೀಯ.

## ನಿಂಗಪ್ಪ ವೀ ಜಿಗೇರಿ ಅವರಿಗೆ ನಾಡಪ್ರಭು ಕೆಂಪೇಗೌಡ ಪ್ರಶಸ್ತಿ ಪ್ರದಾನ

❑ ನೈಜ್ಯ ದೆಸೆ ನ್ಯೂಸ್

**ಕುಷ್ಟಗಿ:ಬೆಂಗಳೂರು ನಗರದ ಚಾಮರಾಜಪೇಟೆಯಲ್ಲಿರುವ ಕನ್ನಡ ಸಾಹಿತ್ಯ ಪರಿಷತ್ತಿನ ಅಕ್ಕಮಹಾದೇವಿ ಸಭಾಂಗಣದಲ್ಲಿ ನಡೆದ ಭವ್ಯ ಸಮಾರಂಭದಲ್ಲಿ ನಿಂಗಪ್ಪ ವೀ. ಜಿಗೇರಿ ಅವರಿಗೆ ಪ್ರತಿಷ್ಠಿತ ನಾಡಪ್ರಭು ಕೆಂಪೇಗೌಡ ಪ್ರಶಸ್ತಿ ಪ್ರದಾನ ಮಾಡಲಾಯಿತು.**



ಈ ಕಾರ್ಯಕ್ರಮವನ್ನು ಸೌರಭ ಸಾಂಸ್ಕೃತಿಕ ಕಲಾ ಬಳಗ, ರೇಮನ್ನಾಪುರ ವತಿಯಿಂದ ಆಯೋಜಿಸಲಾಗಿತ್ತು. ಸಂಸ್ಥೆಯ ಅಧ್ಯಕ್ಷರಾದ ರಹಿಮಾನಸಾಬ್ ಎಚ್. ಕೋಳೂರು ಅವರು ಕಾರ್ಯಕ್ರಮದ ನೇತೃತ್ವ ವಹಿಸಿದ್ದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಾಹಿತಿ, ಬರಹಗಾರರಾದ ಶ್ರೀ ಆರ್.ಕೆ. ಸುಬೇದಾರ ಅವರು ವಹಿಸಿದ್ದರು. ಹಿರಿಯ ಕಲಾವಿದ ಹಾಗೂ ಚಲನಚಿತ್ರ ನಟರಾದ ಶ್ರೀ ಶಿವಕುಮಾರ ಆರಾಧ್ಯ ಅವರು ಜ್ಯೋತಿ ಬೆಳಗಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಮುಖ್ಯ ಅತಿಥಿಗಳಾಗಿ ಹಿರಿಯ ಸಾಹಿತಿ ಹಾಗೂ ಲೇಖಕರಾದ ಶ್ರೀ ಎ.ಎಸ್. ಮಕಾನದಾರ ಸೇರಿದಂತೆ ಹಲವಾರು ಗಣ್ಯರು ಉಪಸ್ಥಿತರಿದ್ದು, ನಿಂಗಪ್ಪ ವೀ. ಜಿಗೇರಿ ಅವರ ಕೃಷಿ ಸಾಮಾಜಿಕ, ಸಾಂಸ್ಕೃತಿಕ ಹಾಗೂ ಪತ್ರಿಕೋದ್ಯಮ ಕ್ಷೇತ್ರದ ಸೇವೆಯನ್ನು ಶ್ಲಾಘಿಸಿದರು. ಪ್ರಶಸ್ತಿ ಪ್ರದಾನ ಸಮಾರಂಭದ ಬಳಿಕ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು.

# 7 ಬುಲೆಟ್ ಟ್ರೈನ್ ಕಾರಿಡಾರ್‌ಗಳಿಗೆ ಕೇಂದ್ರ ಸರ್ಕಾರ ಅನುಮೋದನೆ: ರೈಲ್ವೆ ಸಲಹಾ ಸಮಿತಿ ಮಾಜಿ ಸದಸ್ಯ ಡಾ. ಬಾಬುರಾವ್

❑ ನೈಜ್ಯ ದೆಸೆ ನ್ಯೂಸ್

**ರಾಯಚೂರು: ರೈಲ್ವೆ ಸಲಹಾ ಸಮಿತಿ ಮಾಜಿ ಸದಸ್ಯ ಡಾ. ಬಾಬುರಾವ್ ಅವರು ಪತ್ರಿಕಾ ಹೇಳಿಕೆ ನೀಡಿ, ದೇಶದಲ್ಲಿ 7 ನೂತನ ಬುಲೆಟ್ ಟ್ರೈನ್ ಕಾರಿಡಾರ್‌ಗಳಿಗೆ ಪ್ರಧಾನಮಂತ್ರಿ ಅನುಮೋದನೆ ನೀಡಿದ್ದಾರೆ ಎಂದು ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ ತಿಳಿಸಿರುವುದಾಗಿ ಹೇಳಿದರು. ಈಗಾಗಲೇ ನಿರ್ಮಾಣ ಹಂತದಲ್ಲಿರುವ ಮುಂಬೈ-ಅಹಮದಾಬಾದ್ ಕಾರಿಡಾರ್ ಸೇರಿದಂತೆ ಒಟ್ಟು 7 ಮಾರ್ಗಗಳಿಗೆ ಅನುಮೋದನೆ ದೊರೆತಿದೆ ಎಂದು ಅವರು ಸ್ಪಷ್ಟಪಡಿಸಿದರು.**




ಅನುಮೋದನೆಗೊಂಡ ಕಾರಿಡಾರ್‌ಗಳ ಪ್ರಯಾಣ ಸಮಯದ ಅಂದಾಜು ಪ್ರಕಾರ ಮುಂಬೈ?ಅಹಮದಾಬಾದ್ ಮಾರ್ಗಕ್ಕೆ 1 ಗಂಟೆ 57 ನಿಮಿಷ, ಮುಂಬೈ?ಪುಣೆ ಮಾರ್ಗಕ್ಕೆ 48 ನಿಮಿಷ, ಬೆಂಗಳೂರು?ಚೆನ್ನೈ ಮಾರ್ಗಕ್ಕೆ 1 ಗಂಟೆ 13 ನಿಮಿಷ, ಬೆಂಗಳೂರು?ಹೈದರಾಬಾದ್ ಮಾರ್ಗಕ್ಕೆ 2 ಗಂಟೆ 10 ನಿಮಿಷ, ಪುಣೆ?ಹೈದರಾಬಾದ್ ಮಾರ್ಗಕ್ಕೆ 2 ಗಂಟೆ 8 ನಿಮಿಷ, ದೆಹಲಿ?ಲಕ್ನೋ ಮಾರ್ಗಕ್ಕೆ 2 ಗಂಟೆ, ದೆಹಲಿ?ವಾರಣಾಸಿ ಮಾರ್ಗಕ್ಕೆ 3 ಗಂಟೆ 15 ನಿಮಿಷ ಮತ್ತು ದೆಹಲಿ?ಸಿಲಿಗುರಿ ಮಾರ್ಗಕ್ಕೆ 6 ಗಂಟೆ ಸಮಯ ಬೇಕಾಗಲಿದೆ. ಮುಂಬೈ?ಅಹಮದಾಬಾದ್ ಕಾರಿಡಾರ್ ಈಗಾಗಲೇ ನಿರ್ಮಾಣ ಹಂತದಲ್ಲಿದ್ದು, ಉಳಿದ 7 ಮಾರ್ಗಗಳ ಕಾರ್ಯರೂಪಕ್ಕೆ ಚಾಲನೆ ದೊರೆಯಲಿದೆ.

"ವೇಗದ ಭಾರತ, ಬಲಿಷ್ಠ ಭಾರತ" ಎಂಬ ಧ್ಯೇಯದೊಂದಿಗೆ ಈ ಯೋಜನೆಗಳು ದೇಶದ ಸಂಪರ್ಕವನ್ನು ಮತ್ತಷ್ಟು ಬಲಪಡಿಸಲಿವೆ ಎಂದು ಡಾ. ಬಾಬುರಾವ್ ಅಭಿಪ್ರಾಯಪಟ್ಟರು. ಶೀರ್ಷಿಕೆಯಲ್ಲಿ 7 ಕಾರಿಡಾರ್‌ಗಳು ಎಂದು ಉಲ್ಲೇಖವಿದ್ದರೂ ಮಾಹಿತಿಯಲ್ಲಿ ಮುಂಬೈ?ಅಹಮದಾಬಾದ್ ಸೇರಿದಂತೆ ಒಟ್ಟು 8 ಮಾರ್ಗಗಳ ವಿವರ ನೀಡಲಾಗಿದೆ ಎಂದು ಅವರು ತಿಳಿಸಿದರು.

# ಡಾ.ಫ.ಗು.ಹಳಕಟ್ಟಿ ಜಯಂತಿ ಜುಲೈ 02ರಂದು ರಂಗಮಂದಿರದಲ್ಲಿ ಆಚರಣೆ: ಎಡಿಸಿ ಶಿವಾನಂದ

❑ ನೈಜ್ಯ ದೆಸೆ ನ್ಯೂಸ್

**ರಾಯಚೂರು ಜೂನ್ 25 (ಕರ್ನಾಟಕ ವಾರ್ತೆ): ಜಿಲ್ಲಾಡಳಿತದಿಂದ ಜುಲೈ 02ರಂದು ಬೆಳಿಗ್ಗೆ 11ಕ್ಕೆ ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ವಚನ ಪಿತಾಮಹ ಡಾ.ಫ.ಗು.ಹಳಕಟ್ಟಿ ಅವರ ಜಯಂತಿ ಹಾಗೂ ವಚನ ಸಾಹಿತ್ಯ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಹಮ್ಮಿಕೊಳ್ಳಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ಶಿವಾನಂದ ಅವರು ತಿಳಿಸಿದರು.**



ಇತ್ತೀಚೆಗೆ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಡಾ.ಫ.ಗು. ಹಳಕಟ್ಟಿ ಅವರ ಜಯಂತಿ ಹಾಗೂ ವಚನ ಸಾಹಿತ್ಯ ದಿನಾಚರಣೆ ಅಂಗವಾಗಿ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಜುಲೈ 02ರಂದು ನಗರದ ಪಂಡಿತ ಜಂಬಲದಿನ್ನಿ ರಂಗಮಂದಿರದಲ್ಲಿ ನಡೆಯುವ ಕಾರ್ಯಕ್ರಮಕ್ಕೆ ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು. ಶಿಷ್ಠಾಚಾರಂತೆ ಆಹ್ವಾನ ಪತ್ರಿಕೆ ಮುದ್ರಿಸಿ ಗಣ್ಯರಿಗೆ ವಿತರಿಸಬೇಕು. ಅಂದು ರಂಗ ಮಂದಿರದ ಆವರಣದಲ್ಲಿ ಕುಡಿಯುವ ನೀರು ಸೇರಿದಂತೆ ಎಲ್ಲಾ ಅಗತ್ಯ ಏರ್ಪಾಡು ಮಾಡಬೇಕು. ನಗರದ ಮುಖ್ಯ ರಸ್ತೆಗಳು ಮತ್ತು ಆವರಣದಲ್ಲಿ ಶುಚಿತ್ವ ಕಾಯ್ದುಕೊಳ್ಳಬೇಕು ಎಂದು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಅಪರ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಕಾರ್ಯಕ್ರಮ ಯಶಸಿಗೆ ಸಕಲ ಸಿದ್ಧತೆ ಮಾಡಿಕೊಳ್ಳಲು ಇಲಾಖಾವಾರು ಅಧಿಕಾರಿಗಳಿಗೆ ಜವಾಬ್ದಾರಿ ಹಂಚಿಕೆ ಮಾಡಲಾಗುವುದು. ಯಾವುದೇ ಲೋಪವಾಗದಂತೆ ಅಧಿಕಾರಿಗಳು ಕಾರ್ಯನಿರ್ವಹಿಸಬೇಕು. ಶಾಲಾ ಹಾಗೂ ಕಾಲೇಜ್ ವಿದ್ಯಾರ್ಥಿಗಳಿಗೆ ವಿವಿಧ ಸ್ಪರ್ಧೆಗಳನ್ನು ಹಮ್ಮಿಕೊಂಡು ವಿಜೇತರಿಗೆ ಪ್ರಶಸ್ತಿ ಪ್ರಮಾಣ ಪತ್ರವನ್ನು ನೀಡಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು. ಈ ವೇಳೆ ಸಾಹಿತಿಗಳು ಮಾತನಾಡಿ, ವೇದಿಕೆ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಆಚರಿಸಬೇಕು. ಜನಪ್ರತಿನಿಧಿಗಳು, ಜಿಲ್ಲಾ ಮಟ್ಟದ ಅಧಿಕಾರಿ, ಸಿಬ್ಬಂದಿ ಕಾರ್ಯಕ್ರಮದಲ್ಲಿ ತಪ್ಪದೇ ಪಾಲ್ಗೊಳ್ಳಬೇಕು. ಕಾರ್ಯಕ್ರಮದಲ್ಲಿ ಡಾ.ಫ.ಗು.ಹಳಕಟ್ಟಿ ಅವರ ಬಗ್ಗೆ ಉಪನ್ಯಾಸ ಏರ್ಪಡಿಸಬೇಕು ಎಂದು ಸಲಹೆ ಮಾಡಿದರು.

ಕಾರ್ಯಕ್ರಮದಲ್ಲಿ ಡಾ.ಫ.ಗು.ಹಳಕಟ್ಟಿ ವಿಚಾರಧಾರೆಗಳ ಕುರಿತು ಸಂಪನ್ಮೂಲ ವ್ಯಕ್ತಿಗಳಿಂದ ಉಪನ್ಯಾಸ, ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದ ಸಾಧಕರಿಗೆ ಸನ್ಮಾನ ಹಾಗೂ ಎಸ್ಸೆಸ್ಸೆಲ್ಸಿ, ಪಿಯುಸಿಯಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಬೇಕು ಎಂದು ಇದೆ ವೇಳೆ ಸಾಹಿತಿಗಳು ಮನವಿ ಮಾಡಿದರು. ಇದೇ ಸಂದರ್ಭದಲ್ಲಿ ಮುಖಂಡರಾದ ಡಾ.ಬಿ.ವಿ-ಜಯರಾಜೇಂದ್ರ, ನಾಗರಾಜ ವಕೀಲರು, ದೇವೇಂದ್ರಮ್ಮ ಟಿ.ಸಿ., ಕೆ.ಪಾರ್ವತಿ ಖಾಜಾನಗೌಡ, ಡಾ.ಶಾಂತಾ ಕುಲಕರ್ಣಿ, ರವೀಂದ್ರ ಪೊಲೀಸ್ ಪಾಟೀಲ್, ಮಹೇಶ ಬಿ. ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು ಇದ್ದರು.

OWNER, PUBLISHER, PRINTER BY IRFAN K H NO. 3/117, BALAGANUR, SINDHANOOR, RAICHUR-584138 KARNATAKA AND PRINTED AT SHIVANI PRINTERS, HULKOTI, NEW COURT, OPPOSITE PLOT NO. 28 RS NO. 312/3B, GARAG COMPLEX, GADAG-582101